MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 64 | ಗುರುವಾರ : 25-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 64 | THURSDAY : 25-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಗ್ರಾಹಕರ ಹಕ್ಕುಗಳ ರಕ್ಷಣೆ ಎಲ್ಲರ ಹೊಣೆ: ಕೆ.ವಿ.ಸುರೇಂದ್ರ ಕುಮಾರ್

ಯುವಮಾರ್ಗ ಸುದ್ದಿ



**ರಾಯಚೂರು,ಡಿ.24**–ಗ್ರಾಹಕರ ಹಕ್ಕುಗಳ ರಕ್ಷಣೆ ಎಲ್ಲರ ಹೊಣೆಯಾಗಿದೆ. ಗ್ರಾಹಕರು ತಮ್ಮ ಹಕ್ಕುಗಳು ಹಾಗೂ ಜವಾಬ್ದಾರಿಗಳ ಬಗ್ಗೆ ಹೆಚ್ಚಿನ ಜ್ಞಾನ ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಕೆ.ವಿ.ಸುರೇಂದ್ರ ಕುಮಾರ್ ಅವರು ಹೇಳಿದರು.

ಡಿಸೆಂಬರ್ 24ರ ಬುಧವಾರ ದಂದು ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ನಡೆದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ-2025ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗ್ರಾಹಕ ಹಕ್ಕುಗಳ ಬಗ್ಗೆ ತಿಳಿಯುವುದು ಪ್ರತಿಯೊಬ್ಬರಿಗೂ ಅವಶ್ಯಕವಾಗಿದೆ. ಖರೀದಿದಾರನ ಯೋಗಕ್ಷೇಮದ ದೃಷ್ಟಿಯಲ್ಲಿ ಗ್ರಾಹಕ ಹಕ್ಕುಗಳ ಬಗ್ಗೆ ಅರಿಯುವುದು ಅವಶ್ಯಕತೆಯಿದೆ. ಗ್ರಾಹಕರ ರಕ್ಷಣೆ ಸಮಾಜದ ಧ್ವನಿಯಾದಾಗ ಮಾತ್ರ ಗ್ರಾಹಕರ ಸಂರಕ್ಷಣೆ ಸಾಧ್ಯ ಎಂದರು.

ಉತ್ಪನ್ನಗಳನ್ನು ಖರೀದಿಸುವಾಗ ಹೆಚ್ಚಿನ ಲಾಭದ ಸಲುವಾಗಿ ಕೆಲ ಮಾರಾಟಗಾರರು ಹೆಚ್ಚಿನ ಶುಲ್ಕವನ್ನು ವಿಧಿಸಿ ಗ್ರಾಹಕರಿಗೆ ವಂಚಿಸುತ್ತಾರೆ. ಮಾರಾಟಗಾರರಿಂದ ಆಗುವ ವಂಚನೆಯಿಂದ ತಪ್ಪಿಸಿಕೊಳ್ಳಲು ಏನು ಮಾಡಬೇಕು ಎಂಬುದು ಸೇರಿದಂತೆ ಬೇರೆ ಬೇರೆ ವಿಷಯ ತಿಳಿಯುವುದು ಸೇರಿದಂತೆ ಜನ ಜಾಗೃತಿಗಾಗಿ ರಾಷ್ಟ್ರೀಯ ಗ್ರಾಹಕರ ಹಕ್ಕುಗಳ ದಿನವನ್ನು ಆಚರಿಸಲಾಗುತ್ತದೆ ಎಂದರು.

ರಾಯಚೂರಿನಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಿಂದ ಒಂದು ವರ್ಷದೊಳಗೆ ಸುಮಾರು 10 ಕೋಟಿ ರೂ.ಗಳಿಗೂ ಹೆಚ್ಚು ದಂಡವನ್ನು ವಿಧಿಸಲಾಗಿದೆ. ಕಲ್ಯಾಣ ಕರ್ನಾಟಕ ವಿಭಾಗವು ಹಿಂದುಳಿದ ಪ್ರದೇಶವಾಗಿದೆ. ಇಲ್ಲಿನ ಎಲ್ಲ ಜನರು ಸರಿಯಾಗಿ ಕಾನೂನು ತಿಳಿದುಕೊಂಡು ಈ ಭಾಗವನ್ನು ಅಭಿವೃದ್ಧಿ ಮಾಡಲು ಪ್ರತಿಯೊಬ್ಬರು ಶ್ರಮಿಸಬೇಕೆಂದು ಹೇಳಿದರು.

ಈ ವೇಳೆ ಗೌರವನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಮಾತನಾಡಿ, ಪ್ರತಿವರ್ಷ ಡಿಸೆಂಬರ್ 24ರಂದು ರಾಷ್ಟ್ರೀಯ ಗ್ರಾಹಕ ಹಕ್ಕುಗಳ ದಿನ ಆಚರಿಸಲಾಗುತ್ತದೆ. ಗ್ರಾಹಕರಿಗೆ ಸಂಬಂಧಿಸಿದ ಕಾಯಿದೆ ಕಾನೂನು ಸೇರಿದಂತೆ **(2ನೇ ಪುಟಕ್ಕೆ...)**

## ದ್ವೇಷ ಭಾಷಣ ಪ್ರತಿಬಂಧಕ ಕಾಯ್ದೆ: ರಾಜ್ಯಪಾಲರ ಭೇಟಿ- ಅಶೋಕ್

**ಬೆಂಗಳೂರು, ಡಿ. 24**– ದ್ವೇಷ ಭಾಷಣ ಪ್ರತಿಬಂಧಕ ಕಾಯ್ದೆಗೆ ಅಂಕಿತ ಹಾಕದಂತೆ ರಾಜ್ಯಪಾಲರನ್ನು ಭೇಟಿ ಮಾಡಿ ಮನವಿ ಮಾಡುತ್ತೇವೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಹೇಳಿದರು.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದ್ವೇಷ ಭಾಷಣ ಪ್ರತಿಬಂಧಕ ವಿಧೇಯಕ ಜಾರಿಗೆ ನಮ್ಮ ವಿರೋಧವಿದೆ. ರಾಜ್ಯಪಾಲರು ಸದ್ಯ ಬೆಂಗಳೂರಿನಲ್ಲಿ ಇಲ್ಲ. ಅವರು ಬೆಂಗಳೂರಿಗೆ ಡಿ. 29 ರಂದು ಬರಲಿದ್ದು, ಆನಂತರ ನಾವು ರಾಜ್ಯಪಾಲರನ್ನು ಭೇಟಿಯಾಗಿ ಈ ವಿಧೇಯಕಕ್ಕೆ ತಡೆ ಹಾಕುವಂತೆ ಮನವಿ ಮಾಡುತ್ತೇವೆ ಎಂದರು.

ವಿಪಕ್ಷಗಳನ್ನು ಗುರಿಯಾಗಿಸಿ ಈ ವಿಧೇಯಕವನ್ನು ರಾಜ್ಯ ಸರ್ಕಾರ ಜಾರಿ ಮಾಡಲು ಹೊರಟಿದೆ. ಕಾಂಗ್ರೆಸ್‌ನ ಭ್ರಷ್ಟಾಚಾರ ವೈಫಲ್ಯಗಳ ಬಗ್ಗೆ ಜನರಿಗೆ ತಮ್ಮ ಭಾವನೆಯನ್ನು ವ್ಯಕ್ತಪಡಿಸುವುದಕ್ಕೂ ಈ ದ್ವೇಷ ಭಾಷಣ ಪ್ರತಿಬಂಧಕ ವಿಧೇಯಕ ಅಡ್ಡಿಯಾಗಲಿದೆ. ಹಾಗಾಗಿ ಈ ವಿಧೇಯಕ ಜಾರಿ ಬೇಡ ಎಂದು ರಾಜ್ಯಪಾಲರಿಗೆ ಮನವಿ ಮಾಡುತ್ತೇವೆ ಎಂದು ಆರ್. ಅಶೋಕ್ ಹೇಳಿದರು.



ಬೆಳಗಾವಿಯಲ್ಲಿ ನಡೆದ ವಿಧಾನಮಂಡಲದ ಚಳಿಗಾಲದ ಅಧಿವೇಶನದಲ್ಲಿ ಈ ದ್ವೇಷ ಭಾಷಣ ಪ್ರತಿಬಂಧಕ ವಿಧೇಯಕವನ್ನು ಕಾಂಗ್ರೆಸ್ ಸರ್ಕಾರ ತರಾತುರಿಯಲ್ಲಿ ಅಂಗೀಕಾರ ಮಾಡಿಕೊಂಡಿದೆ. ವಿಪಕ್ಷಗಳಿಗೆ ಈ ವಿಧೇಯಕದ ಮೇಲೆ ಮಾತನಾಡಲು ಅವಕಾಶ ಕೊಡದೆ ಅದನ್ನು ಅಂಗೀಕಾರ ಮಾಡಿಕೊಂಡಿದ್ದಾರೆ. ಇದು ಸರಿಯಲ್ಲ. ಈ ಮಸೂದೆ ಜಾರಿಯಿಂದ ಮಾಧ್ಯಮಗಳಿಗೆ ತೊಂದರೆಗಳಾಗಲಿವೆ. ವಿರೋಧ ಪಕ್ಷಗಳನ್ನು ಗುರಿಯಾಗಿಸಿ ಅವರನ್ನು ಜೈಲಿಗೆ ಕಳುಹಿಸುವ ಹುನ್ನಾರ ಈ ವಿಧೇಯಕದ ಹಿಂದಿದೆ ಎಂದು ದೂರಿದರು. ಅಧಿವೇಶದಲ್ಲಿ ಉತ್ತರ ಕರ್ನಾಟಕ ಅಭಿವೃದ್ಧಿ ಬಗ್ಗೆ ಸುಮಾರು 21 ಗಂಟೆ ಕಾಲ ಚರ್ಚೆಯಾಗಿದೆ. ನಾವು ಮುಖ್ಯಮಂತ್ರಿಗಳು ಉತ್ತರ ಕರ್ನಾಟಕದ ಅಭಿವೃದ್ಧಿಗೆ ಏನನ್ನಾದರೂ ಘೋಷಣೆ ಮಾಡುತ್ತಾರೆ ಎಂಬ ನಿರೀಕ್ಷೆ ಹೊಂದಿದ್ದೇವು. ಆದರೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಉತ್ತರ ಕರ್ನಾಟಕ ಭಾಗಕ್ಕೆ ಯಾವುದೇ ಘೋಷಣೆ ಮಾಡಿಲ್ಲ ಎಂದು ಟೀಕಿಸಿದರು.

ಈ ಸರ್ಕಾರದಲ್ಲಿ ಸಿಎಂ ಕುರ್ಚಿಯ ಒಳ ಜಗಳ ನಡೆದಿದೆ. ಯಾವುದೇ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ. ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡುತ್ತಿಲ್ಲ. ಆದರೆ, ಹಣ ಹೊಡೆಯುವ ಕೆಲಸ ಮಾತ್ರ ನಡೆದಿದೆ ಎಂದು ಆರೋಪಿಸಿದರು.

ಗೃಹಲಕ್ಷ್ಮಿ ಯೋಜನೆಯಡಿ ಕಳೆದ ಫೆಬ್ರವರಿ-ಮಾರ್ಚ್‌ನಲ್ಲಿ 5 ಸಾವಿರ ಕೋಟಿ ಹಣ ಇದುವರೆಗೂ ಬಿಡುಗಡೆಯಾಗಿಲ್ಲ. ಇದೊಂದು ದೊಡ್ಡ ಹಗರಣ ಈ ಎರಡು ತಿಂಗಳ ಹಣ ಎಲ್ಲಿ ಹೋಗಿದೆ ಎಂಬುದೇ ಗೊತ್ತಿಲ್ಲ. ನಾವಂತೂ ಗೃಹಲಕ್ಷ್ಮಿಯವರ ಖಾತೆಗೆ ಹಣ ಜಮಾವಣೆ ಆಗುವವರೆಗೂ ಹೋರಾಡಟ ನಿಲ್ಲಿಸಲ್ಲ ಎಂದರು.

ಗೃಹಲಕ್ಷ್ಮಿ ಹಗರಣವನ್ನು ನಾವು ಸದನದಲ್ಲಿ ಪ್ರಸ್ತಾಪಿಸಿ ಸರ್ಕಾರವನ್ನು ಎಚ್ಚರಿಸುವ ಕೆಲಸ ಮಾಡಿದ್ದೇವೆ. **(2ನೇ ಪುಟಕ್ಕೆ...)**

## ಕಲಬುರಗಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಿಂದ ಪ್ರವೇಶ ಪ್ರಾರಂಭ; ಸದುಪಯೋಗಕ್ಕೆ ವಿದ್ಯಾರ್ಥಿಗಳಿಗೆ ಸಲಹೆ

ಯುವಮಾರ್ಗ ಸುದ್ದಿ

**ರಾಯಚೂರು,ಡಿ.24**ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ 2026-27 ಸಾಲಿಗಾಗಿ ಸ್ನಾತಕೋತ್ತರ ಕೋರ್ಸಗಳಿಗೆ ಪ್ರವೇಶಾತಿ ಆರಂಭವಾಗಿದೆ. ವಿಶ್ವವಿದ್ಯಾಲಯದಿಂದ ಪ್ರಸ್ತುತ ಪಿಜಿ ಕೋರ್ಸ್‌ಗಳಿಗೆ ಸಿಯುಇಟಿ ಮೂಲಕ ಅರ್ಹ ಅಭ್ಯರ್ಥಿಗಳಿಗೆ ಪ್ರವೇಶ ನೀಡಲಾಗುತ್ತಿದ್ದು, ಈ ಭಾಗದ ವಿದ್ಯಾರ್ಥಿಗಳು ಹೆಚ್ಚಿನ ಮಟ್ಟದಲ್ಲಿ ಪ್ರವೇಶ ಪಡೆದು ಶೈಕ್ಷಣಿಕ ಪ್ರಗತಿ ಸಾಧಿಸಬೇಕೆಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ.ಬಸವರಾಜ ಸೋಮನಮರಡಿ ಅವರು ಹೇಳಿದರು.



ರಾಯಚೂರಿನ ಪತ್ರಿಕಾ ಭವನದಲ್ಲಿ ಡಿಸೆಂಬರ್ 24ರಂದು ಪ್ರತಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಿಂದ ಬಿಎಡ್ ಕೋರ್ಸ ಒಳಗೊಂಡಂತೆ ಸ್ನಾತಕೋತ್ತರ ಕೋರ್ಸ್ಗಳಾದ ಎಂ.ಎ ಇಂಗ್ಲಿಷ್, ಹಿಂದಿ, ಕನ್ನಡ, ಭಾಷಾಶಾಸ್ತ್ರ, ಜಾನಪದ ಮತ್ತು ಬುಡಕಟ್ಟು ಅಧ್ಯಯನ, ಅರ್ಥಶಾಸ್ತ್ರ, ಇತಿಹಾಸ, ಸಾರ್ವಜನಿಕ ಆಡಳಿತ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನಕ್ಕೆ 30 ಸೀಟು, ಎಂ.ಎಸ್ಸಿ. ಗಣಿತ, ಭೌತಶಾಸ್ತ್ರ, ರಸಾಯನ ಶಾಸ್ತ್ರ, ಭೂಗೋಳ, ಭೂವಿಜ್ಞಾನ, ಸಸ್ಯಶಾಸ್ತ್ರ, ಪ್ರಾಣಿಶಾಸ್ತ್ರ ಮತ್ತು ಅಂಕಿಅಂಶಗಳು ಮತ್ತು ದತ್ತಾಂಶ ವಿಶ್ಲೇಷಣೆ 30 ಸೀಟು, ಎಂ.ಎಸ್ಸಿ. ಮನೋವಿಜ್ಞಾನ 40 ಸೀಟು, ಜೆನೆಟಿಕ್ಸ್ ಮತ್ತು ಜೀನೋಮಿಕ್ 20 ಸೀಟು, ಎಂ.ಕಾಂ (ಬ್ಯಾಂಕಿಂಗ್ ಮತ್ತು ಹಣಕಾಸು ತಂತ್ರಜ್ಞಾನ) 30 ಸೀಟು, ಎಂ.ಕಾಂ 30 ಸೀಟು, ಎಂ.ಬಿ.ಎ 60 ಸೀಟು, ಎಂ.ಬಿ.ಎ ಪ್ರವಾಸೋದ್ಯಮ ಮತ್ತು ಪ್ರಯಾಣ ನಿರ್ವಹಣೆಯಲ್ಲಿ 30 ಸೀಟು, ಸಮಾಜ ಕಾರ್ಯ 30 ಸೀಟು, ಎಂ.ಸಿ.ಎ 60 ಸೀಟು, ಎಲ್.ಎಲ್.ಎಂ 30 ಸೀಟು, ಬಿ.ಎಡ್ 50 ಸೀಟು, ಎಂ.ಎಡ್ 50 ಸೀಟು, ಎಂ.ಟೆಕ್ ಪವರ್ ಅಂಡ್ ಎನರ್ಜಿ ಇಂಜಿನಿಯರಿಂಗ್ 18 ಸೀಟು, ಎಂ.ಟೆಕ್ ಅರ್‌ಎಫ್‌& ಮೈಕ್ರೋವೇವ್ ಇಂಜಿನಿಯರಿಂಗ್ 18 ಸೀಟು, ಎಂ.ಟೆಕ್ ಎಐ ಮತ್ತು ಎಂಎಲ್ 24 ಸೀಟು, ಎಂಪಿಎ ಹಿಂಸ್ತುಸ್ಥಾನಿ ಗಾಯನ 10 ಸೀಟು, ಎಂಪಿಎ ಇನ್‌ಸ್ಟ್ರುಮೆಂಟಲ್ (ಹಿಂಸ್ತುಸ್ಥಾನಿ ತಬಲಾ) 10 ಸೀಟು, ಮಾಸ್ಟರ್ ಆಫ್ ವಿಸುವಲ್ ಆರ್ಟ್ಸ (ಪೆಂಟಿಂಗ್) 10 ಸೀಟುಗಳನ್ನು ಸಿಯುಇಟಿ ಪರೀಕ್ಷೆಯ ಮೂಲಕ ಅಭ್ಯರ್ಥಿಗಳಿಗೆ ನೀಡಲಾಗುತ್ತದೆ ಎಂದರು.

ಅರ್ಹ ಅಭ್ಯರ್ಥಿಗಳಿಂದ ಈಗಾಗಲೇ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಪ್ರಕ್ರಿಯೆ 2025ರ ಡಿಸೆಂಬರ 14ರಿಂದ ಪ್ರಾರಂಭವಾಗಿದೆ. ಸ್ನಾತಕ (ಯುಜಿ) ಅಂತಿಮ ಸೆಮೆಸ್ಟರನಲ್ಲಿ ಓದುತ್ತಿರುವ ಮತ್ತು ಈಗಾಗಲೇ ಉತ್ತೀರ್ಣರಾಗಿರುವ ಆಸಕ್ತ ಅರ್ಹವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿದ್ದು, ಅರ್ಜಿಗಳನ್ನು ಆನ್‌ಲೈನ್ ವೆಬ್‌ಸೈಟ್ ವಿಳಾಸ: https://exams.nta.nic.in/cuet-pg/

**(2ನೇ ಪುಟಕ್ಕೆ...)**

## ರೈತರ ಭದ್ರತೆಯ ಬದುಕಿಗೆ ಸಮಗ್ರ ಅಭಿವೃದ್ಧಿ ಯೋಜನೆ ಅಗತ್ಯ- ಕಲ್ಮಠ ಶ್ರೀ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.24**–ದೇಶದ ಆಹಾರ ಭದ್ರತೆಗೆ ಕಾರಣರಾದ ನಮ್ಮ ರೈತರ ಬದುಕು ಆನಂದದಾಯಕವಾಗಲು ಅವರ ಭದ್ರತೆಗೆ, ವಿಶ್ರಾಂತ ಬದುಕಿಗೆ ಸಮಗ್ರ ಅಭಿವೃದ್ಧಿ ಯೋಜನೆ ರೂಪಿಸುವುದು ಅಗತ್ಯವಿದೆ ಎಂದು ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಅವರು ಬುಧವಾರ ಪಟ್ಟಣದ ಕಲ್ಮಠ ವಿದ್ಯಾಸಂಸ್ಥೆಯಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ರೈತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕೃಷಿ ತಪ್ಪಿದರೆ ದೇಶದಲ್ಲಿ ಯಾವುದು ಸರಿಯಾಗುವುದಿಲ್ಲ. ಪ್ರತಿ ತುತ್ತಿನ ಹಿಂದೆ ಸಾವಿರಾರು ಜನರ ಶ್ರಮವಿದೆ ಎನ್ನುವುದನ್ನು ನಾವು ಯಾವತ್ತು ಮರೆಯಬಾರದು. ರೈತರ ಪಂಪಸೆಟ್ ಗಳಿಗೆ ಸಮರ್ಪಕವಾಗಿ ವಿದ್ಯುತ್ ಒದಗಿಸಬೇಕು.ಸರಕಾರ ಏನೂ ಕೊಟ್ಟರೂ ಮಳೆ ಕೊಡಲಾಗುವುದಿಲ್ಲ. ಅದ್ದರಿಂದ, ನಾವುಗಳೆಲ್ಲರೂ ಹೆಚ್ಚು ಹೆಚ್ಚು ಮರಗಳನ್ನು ನೆಟ್ಟು ಬೆಳೆಸಬೇಕಾಗಿದೆ. ಮರವಿದ್ದರೆ ಮಳೆ, ಮಳೆಯಿದ್ದರೆ ಬೆಳೆ ಬೆಳೆಯಿದ್ದರೆ ಬದುಕು ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತಾಲೂಕಾ ವಕೀಲರ ಸಂಘದ ಅಧ್ಯಕ್ಷ ರವಿಕುಮಾರ ಪಾಟೀಲ ವಕೀಲರು ಮಾತನಾಡಿ ರೈತರು ಹಗಲು ರಾತ್ರಿ ಕಷ್ಟಪಟ್ಟು ಬೆಳೆ ಬೆಳೆಯುತ್ತಾರೆ ಆದರೆ ರೈತರ ಬೆಳೆಗೆ ಉತ್ತಮ ಬೆಲೆ ಸಿಗಬೇಕು ಎಂದರು

ರೈತರನ್ನು ಗುರುತಿಸಿ ಅವರಿಗೆ ಪ್ರಶಸ್ತಿ ನೀಡಿ ಗೌರವಿಸುತ್ತಿರುವುದು ಮತ್ತು ರೈತರ ಪಾದಪೂಜೆ ಕಾರ್ಯಕ್ರಮ ಆಯೋಜಿಸಿರುವುದು ನಿಜಕ್ಕೂ ಶ್ಲಾಘನೀಯ ಎಂದು ಪ್ರಶಂಸಿಸಿದರು. ನಂತರ ಕಲ್ಮಠ ವಿದ್ಯಾ ಸಂಸ್ಥೆಯ ಹಳೆಯ ವಿದ್ಯಾರ್ಥಿಗಳಿಗೆ, ಪ್ರಗತಿಪರ ರೈತರಿಗೆ "ಕಲ್ಮಠ ಶ್ರೀ ಕೃಷಿರತ್ನ ಪ್ರಶಸ್ತಿ" ನೀಡಿ ಗೌರವಿಸಲಾಯಿತು ಜೊತೆಗೆ ರೈತರ ಪಾದಪೂಜೆ ಪೂಜೆ ಕಾರ್ಯವು ಜರುಗಿತು.

ಕೃಷಿಗೆ ಸಂಬಂಧಿಸಿದ ಕುಟ್ಟುವುದು, ಬೀಸುವುದು , ಗುಡಿಸಲಿನಲ್ಲಿ ರೊಟ್ಟಿ ಮಾಡುವುದು,ಭತ್ತರಾಶಿ ಮಾಡುವದು, ಮಗುವಿಗೆ ಸ್ನಾನ ಮಾಡಿಸುವದು,ಬಳೆ ಹಾಕುವುದು,ಕ್ಷೌರ ಮಾಡುವದು, ಹೀಗೆ ಅನೇಕ ಸನ್ನಿವೇಶಗಳನ್ನು ಶಾಲೆಯ ವಿದ್ಯಾರ್ಥಿಗಳು ತುಂಬಾ ಆಸಕ್ತಿಯಿಂದ ಸುಂದರವಾಗಿ ಶಾಲಾ ಆವರಣವನ್ನು ಸಜ್ಜುಗೊಳಿಸಿ ಹಳ್ಳಿಯ ಸೊಗಡನ್ನು ಪರಿಚಯಿಸಿದರು.

ಪ್ರೌಢಶಾಲಾ ಮುಖ್ಯೋಪಾಧ್ಯಾಯ ಪ್ರಭಯ್ಯ ಸ್ವಾಮಿ ಅಧ್ಯಕ್ಷತೆ ವಹಿಸಿದ್ದರು ಆಡಳಿತಾಧಿಕಾರಿ ಸಂಗಯ್ಯ ಸ್ವಾಮಿ. ಆರ್, ವೆಂಕಯ್ಯ ಶೆಟ್ಟಿ , ಶಂಕರಾನಂದ ಕೃಪಾಸಾಗರ ಪಾಟೀಲ್ ಎಸ್.ಎಸ್. ಪಾಟೀಲ್. ಸಿದ್ದನಗೌಡ ಪಾಟೀಲ್ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಉಪನ್ಯಾಸಕಿ ಗೌರಮ್ಮ ಇವರು ರಾಷ್ಟ್ರೀಯ ರೈತರ ದಿನಾಚರಣೆ ಕುರಿತು ಉಪನ್ಯಾಸ ನೀಡಿದರು. ವಿದ್ಯಾರ್ಥಿಗಳಾದ ಕಾವೇರಿ, ಶರಣಬಸವ ತೇಜಸ್ವಿನಿ, ಭವಾನಿ,ಧನ್ಯಶ್ರೀ ಅನಿಸಿಕೆ ವ್ಯಕ್ತಪಡಿಸಿದರು.ಪ್ರಾಥಮಿಕ ಶಾಲೆಯ ಮುಖ್ಯಗುರು ಮಂಜುನಾಥ ಕಮತರ ಪ್ರಾಸ್ತಾವಿಕ ಮಾತುಗಳನ್ನಾಡಿದರು

ಶಿಕ್ಷಕ ಎಂ. ಎಂ. ಹಿರೇಮಠ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕಿ ರೂಪ ಸ್ವಾಗತಿಸಿದರು ಶಿಕ್ಷಕಿ ಪ್ರಭಾವತಿ ವಂದಿಸಿದರು. ಶಾಲೆಯ ಶಿಕ್ಷಕರು, ಪಾಲಕರು ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

## ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನಿಂದ ಡಿಸೆಂಬರ್ 28ರಂದು ರಾಷ್ಟ್ರೀಯ ಪತ್ರಿಕಾ ದಿನಾಚರಣೆ, ಪ್ರಶಸ್ತಿ ಪ್ರದಾನ ಸಮಾರಂಭ

**ರಾಯಚೂರು ಡಿ,ಡಿ.24**– ರಾಯಚೂರು ರಿಪೋರ್ಟರ್ಸ್ ಗಿಲ್ಡ್, ಜಿಲ್ಲಾ ಮತ್ತು ಪ್ರಾದೇಶಿಕ ದಿನ ಪತ್ರಿಕೆಗಳ ಸಂಪಾದಕರ ಸಂಘ ರಾಯಚೂರು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭವನ್ನು ನಗರದ ಪತ್ರಿಕಾ ಭವನದಲ್ಲಿ ಡಿಸೆಂಬರ್ 28ರ ಬೆಳಗ್ಗೆ 10.30ಕ್ಕೆ ಹಮ್ಮಿಕೊಳ್ಳಲಾಗಿದೆ.ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಉದ್ಘಾಟಿಸುವರು.ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ ಅವರು ಪತ್ರಕರ್ತರ ತುರ್ತುನಿಧಿಗೆ ಚಾಲನೆ ನೀಡಲಿದ್ದಾರೆ.ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ ಅವರು ರಾಯಚೂರು ರಿಪೋರ್ಟರ್ಸ್ ಗಿಲ್ಡ್ ವೆಬ್‌ಸೈಟ್ ಲೋಕಾರ್ಪಣೆ ಮಾಡುವರು. ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷರಾದ ವಿಜಯ್ ಜಾಗಟಗಲ್ ಅಧ್ಯಕ್ಷತೆ ವಹಿಸುವರು.ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಹಾಗೂ ರಾಯಚೂರು ನಗರ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ ಅವರು ಪತ್ರಿಕಾ ವಿತರಕರಿಗೆ ಜರ್ಕಿನ್ ವಿತರಣೆ ಮಾಡಲಿದ್ದಾರೆ.ಮುಖ್ಯ ಅತಿಥಿಗಳಾಗಿ ವಿಜಯವಾಣಿ ಪತ್ರಿಕೆಯ ಗಂಗಾವತಿ ಸ್ಥಾನಿಕ ಸಂಪಾದಕರಾದ ಜಗನ್ನಾಥ ಆರ್.ದೇಸಾಯಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಡಾ.ಜಿ.ಸುರೇಶ, ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾಧ್ಯಕ್ಷರಾದ ಪಿ.ಚನ್ನಬಸವ ಬಾಗಲವಾಡ ಅವರು ಸೇರಿದಂತೆ ಇತರರು ಉಪಸ್ಥಿತರಿರುವರು.ಕಾರ್ಯಕ್ರಮದಲ್ಲಿ ಪ್ರಜಾಪ್ರಸಿದ್ಧ ದಿನಪತ್ರಿಕೆಯ ಹಿರಿಯ ಉಪ ಸಂಪಾದಕರಾದ ರಘುನಾಥರೆಡ್ಡಿ ಮನ್ನಲಾಪೂರು ಅವರಿಗೆ ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಪ್ರತಿಷ್ಠಿತ ಜೀವನಮಾನ ಸಾಧನೆ ವಿಶೇಷ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಕಲಬುರಗಿ ಪೀಠದ ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಆಯುಕ್ತರಾದ ಬಿ.ವೆಂಕಟಸಿಂಗ್ ಅವರಿಗೆ ವಿಶೇಷ ಸನ್ಮಾನ ಮಾಡಲಾಗುತ್ತದೆ. ಪ್ರಜಾವಾಣಿ ದಿನಪತ್ರಿಕೆಯ ರಾಯಚೂರು ಜಿಲ್ಲಾ ವರದಿಗಾರರಾದ ಚಂದ್ರಕಾಂತ್ ಮಸಾನಿ ಅವರಿಗೆ ದಿ.ದಿದ್ದಿ ಕಿಶನ್‌ರಾವ್ ಸ್ಮರಣಾರ್ಥ ಹಾಗೂ ದಿ.ಹನುಮಂತ್ರಾಯ ಗೌಡ ಗೌರವಾರ್ಥ ಗ್ರಾಮೀಣ/ನಗರ ಅತ್ಯುತ್ತಮ ವರದಿಗಾರಿಕೆ ದತ್ತಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಪವರ್ ಟಿವಿ ಛಾಯಾಗ್ರಾಹಕರರಾದ ಅಬ್ದುಲ್ ಖಾದರ್ ಅವರಿಗೆ ದಿ.ರಘುನಾಥ್ ಸಿಂಗ್ ಬೊಮ್ಮನಾಳ ಸ್ಮರಣಾರ್ಥ ಹಾಗೂ ಪ್ರಕಾಶ್ ಮಸ್ಕಿ ಪ್ರಾಯೋಜಿತ ಅತ್ಯುತ್ತಮ ಛಾಯಾಗ್ರಾಹಕ ದತ್ತಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಅಮೋಘ ಕೇಬಲ್ ವರದಿಗಾರರಾದ ಶ್ರೀನಿವಾಸ ಕೆ. ಅವರಿಗೆ ಕೆ.ಅಡಿವೆಪ್ಪ ಸ್ಮಾರಕ, ಕೆ.ಸತ್ಯನಾರಾಯಣ ಪ್ರಾಯೋಜಿತ ದತ್ತಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಪ್ರಜಾಪ್ರಸಿದ್ಧ ದಿನಪತ್ರಿಕೆಯ ವರದಿಗಾರರಾದ ಬಿ. ರಾಜು ಅವರಿಗೆ ದಿ.ಎನ್.ಕೆ.ಕುಲಕರ್ಣಿ ಸ್ಮರಣಾರ್ಥ ರಾಯಚೂರು ವಾಣಿ ಮತ್ತು ಕೊಪ್ಪಳ ಜಿಲ್ಲಾ ಅತ್ಯುತ್ತಮ ವರದಿಗಾರ ದತ್ತಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ ಎಂದು ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಪ್ರಧಾನ ಕಾರ್ಯದರ್ಶಿಗಳಾದ ವೆಂಕಟೇಶ ಹೂಗಾರ ಹಾಗೂ ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಸಂಪಾದಕರ ಸಂಘದ ಪ್ರಧಾನ ಕಾರ್ಯದರ್ಶಿ ಖಾನ್‌ಸಾಬ್ ಮೋಮಿನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೊದಲನೇಯ ಪುಟದಿಂದ

# ಗ್ರಾಹಕರ ಹಕ್ಕುಗಳ ರಕ್ಷಣೆ ಎಲ್ಲರ ಹೊಣೆ: ಕೆ.ವಿ.ಸುರೇಂದ್ರ ಕುಮಾರ್

ಬೇರೆ ಬೇರೆ ಅಂಶಗಳನ್ನು ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವುದು ಮುಖ್ಯವಾಗಬೇಕು. ಗ್ರಾಹಕರು ಯಾವುದೇ ವಸ್ತು, ಸರಕುಗಳನ್ನು ಖರೀದಿಸುವ ಸಂದರ್ಭದಲ್ಲಿ ಆ ವಸ್ತುವಿನ ಗುಣಮಟ್ಟ, ಅವಧಿ ಮುಂತಾಗಿ ಪರಿಶೀಲಿಸಿ ಕಡ್ಡಾಯವಾಗಿ ರಸೀದಿ ಪಡೆದುಕೊಳ್ಳಬೇಕು. ಅಲ್ಲದೆ ಖರೀದಿಸಿದ ವಸ್ತುವಿನ ಗುಣಮಟ್ಟ ಕಳಪೆ ಮತ್ತು ದೋಷಪೂರಿತವಾಗಿದ್ದಲ್ಲಿ ಗ್ರಾಹಕರು ರಶೀದಿಯೊಂದಿಗೆ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದರೆ ಗ್ರಾಹಕರಿಗೆ ಕಾನೂನಿನಡಿ ಸೂಕ್ತ ಪರಿಹಾರ ಒದಗಿಸಲು ಸಾಧ್ಯವಾಗುತ್ತದೆ ಎಂದರು.

ಈ ವೇಳೆ ಉಪನ್ಯಾಸಕರಾಗಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಪ್ರಭುದೇವ್ ಅವರು ಮಾತನಾಡಿ, 1986ರಲ್ಲಿ ಗ್ರಾಹಕ ಸಂರಕ್ಷಣಾ ಕಾಯ್ದೆಯನ್ನು ಅಂಗೀಕರಿಸಲಾಯಿತು. ಈ ಕಾಯ್ದೆಗೆ ಡಿಸೆಂಬರ್ 24ರಂದು ರಾಷ್ಟ್ರಪತಿಗಳ ಒಪ್ಪಿಗೆ ಸಿಕ್ಕಿತು. ಉತ್ಪಾದಕರು ಅಥವಾ ಮಾರಾಟಗಾರರಿಂದಾಗುವ ಮೋಸ, ವಂಚನೆ, ಶೋಷಣೆಗಳಿಂದ ಗ್ರಾಹಕರಿಗೆ ರಕ್ಷಣೆ ಒದಗಿಸುವ ಉದ್ದೇಶದಿಂದ ಈ ಕಾಯಿದೆ ಜಾರಿಗೆ ಬಂದಿದೆ. ಅಂದಿನಿಂದ ಈ ದಿನದ ನೆನಪಿನಲ್ಲಿ ಪ್ರತಿವರ್ಷ ರಾಷ್ಟ್ರೀಯ ಗ್ರಾಹಕ ಹಕ್ಕುಗಳ ದಿನವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಗ್ರಾಹಕರ ಹಕ್ಕುಗಳ ಬಗ್ಗೆ ಹಾಗೂ ಅವರ ಜವಾಬ್ದಾರಿಗಳ ಬಗ್ಗೆ ಜಾಗೃತಿ ಮೂಡಿಸುವುದು. ಮಾರಾಟಗಾರರಿಂದ ಗ್ರಾಹಕರಿಗೆ ಆಗುವ ವಂಚನೆಗಳಿಂದ ರಕ್ಷಿಸುವ ಸಲುವಾಗಿ ರಾಷ್ಟ್ರೀಯ ಗ್ರಾಹಕರ ಹಕ್ಕುಗಳ ದಿನವು ಮಹತ್ವದ್ದಾಗಿದೆ ಎಂದರು.

ವಿದ್ಯಾರ್ಥಿಗಳಿಗೆ ಜಾಗೃತಿ: ರಾಷ್ಟ್ರೀಯ ಗ್ರಾಹಕರ ದಿನಾಚರಣೆ-2025ರ ಕಾರ್ಯಕ್ರಮದ ಅಂಗವಾಗಿ ಕರ್ನಾಟಕ ಆಹಾರ ನಾಗರಿಕ ಮತ್ತು ಸರಬರಾಜು ನಿಗಮ ನಿಯಮಿತದಿಂದ ಸಾರ್ವಜನಿಕ ವಿತರಣೆಯಡಿ ವಿತರಿಸಲಾದ ಸಾರವರ್ಧಿತ ಅಕ್ಕಿಯ ಕುರಿತು, ಕಾನೂನು ಮಾಪನ ಶಾಸ್ತ್ರ ಇಲಾಖೆಯಿಂದ ತೂಕ ಮತ್ತು ಅಳತೆ ಹಾಗೂ ಮೆ: ಸುಮಂತ್ ಫ್ಲಾಮೋಜನ್ ಇಂಡೇನ್ ಗ್ಯಾಸ್ ಏಜೆನ್ಸಿಯಿಂದ ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿಯ ಎಲ್.ಪಿ.ಜಿ ಸುರಕ್ಷತೆ ಕುರಿತು ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲಾಯಿತು.

ಇದೇ ಸಂದರ್ಭದಲ್ಲಿ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್, ಜಿಲ್ಲಾ ನ್ಯಾಯವಾದಿಗಳ ಸಂಘದ ಉಪಾಧ್ಯಕ್ಷರಾದ ನಜೀರ್, ವಕೀಲರಾದ ಗೌರೀಶ್, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಶ್ರೀ ಕೃಷ್ಣ ಶಾವಂತಗೇರಿ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ಅಮೃತಾ ಪಿ.ಚವ್ಹಾಣ, ಕರ್ನಾಟಕ ಆಹಾರ ನಾಗರಿಕ ಮತ್ತು ಸರಬರಾಜು ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರಾದ ಪ್ರಕಾಶ್, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ವ್ಯವಸ್ಥಾಪಕರಾದ ಹರೀಶ್, ಪ್ರಥಮ ದರ್ಜೆ ಸಹಾಯಕರಾದ ಜಿ.ಶ್ರೀಹರಿ ಸೇರಿದಂತೆ ಇತರರು ಇದ್ದರು.

## ಕಲಬುರಗಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಿಂದ ಪ್ರವೇಶ ಪ್ರಾರಂಭ; ಸದುಪಯೋಗಕ್ಕೆ ವಿದ್ಯಾರ್ಥಿಗಳಿಗೆ ಸಲಹೆ

ನಲ್ಲಿ 2026ರ ಜನವರಿ 14 ರಾತ್ರಿ 11.50ರೊಳಗಾಗಿ ಸಲ್ಲಿಸಬಹುದಾಗಿದೆ ಎಂದರು.

ಕರ್ನಾಟಕ ಕೇಂದ್ರೀಯ ವಿಶ್ವ ವಿದ್ಯಾಲಯ ಒದಗಿಸುವ ಕೋರ್ಸ್‌ಗಳ ವಿವರ ಮತ್ತು ಅವುಗಳ ಅರ್ಹತೆಯ ವಿವರ ವಿಶ್ವವಿದ್ಯಾಲಯದ ವೆಬ್‌ಸೈಟ್ ವಿಳಾಸ: www.cuk.ac.in ನಲ್ಲಿ ಮತ್ತು https://nta.ac.in/, https://exams.nta.nic.in/cuet-pg/ ನಲ್ಲಿ ಲಭ್ಯವಿದೆ. ಭಾಷಾ ಪ್ರಶ್ನೆ ಪತ್ರಿಕೆಗಳು ಹೊರತು ಪಡಿಸಿ ಉಳಿದ ಎಲ್ಲಾ ಪ್ರವೇಶ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕೇವಲ ಇಂಗ್ಲಿಷ್ ಮತ್ತು ಹಿಂದಿ ಭಾಷೆಯಲ್ಲಿರಲಿವೆ ಎಂದರು.

ಪರೀಕ್ಷೆಗಳು, ಪರೀಕ್ಷೆ ವಿಧಾನ, ವೇಳಾ ಪಟ್ಟಿ, ಅರ್ಹತೆ ಮತ್ತು ಇತರ ಮಾಹಿತಿಗಾಗಿ ಅಭ್ಯರ್ಥಿಗಳು ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಸಿಯುಇಟಿ (ಪಿಜಿ)-2026ರ ಮಾಹಿತಿ ಬುಲೆಟಿನ್ ಪರಿಶೀಲಿಸಿಕೊಳ್ಳಬಹುದಾಗಿದೆ. ಎನ್‌ಟಿಎ ಫಲಿತಾಂಶಗಳನ್ನು ಪ್ರಕಟಿಸಿದ ನಂತರ ಪ್ರವೇಶಕ್ಕಾಗಿ ನೋಂದಾಯಿಸಲು ವಿಶ್ವವಿದ್ಯಾಲಯದಿಂದ ಅಭ್ಯರ್ಥಿಗಳಿಗೆ ಕರೆ ನೀಡಲಾಗುತ್ತದೆ ಎಂದರು.

ವಿದ್ಯಾರ್ಥಿಗಳು ಅರ್ಜಿಯ ವಿವರಗಳನ್ನು ಸಿಯುಕೆ ವೆಬ್‌ಸೈಟ್ ವಿಳಾಸ: www.cuk.ac.in ನಲ್ಲಿ ಭರ್ತಿ ಮಾಡಬೇಕು. ಹೆಚ್ಚಿನ ಮಾಹಿತಿಗಾಗಿ 011 -40759000, 011-69227700 ಅನ್ನು ಸಂಪರ್ಕಿಸಬಹುದು. ಅಥವಾ helpdesk-cuetpg@nta.ac.in ನಲ್ಲಿ ಇ-ಮೇಲ್ ಮಾಡಬಹುದು. ಜೊತೆಗೆ ಅಭ್ಯರ್ಥಿಗಳು ಪರೀಕ್ಷೆಗೆ ಸಂಬಂಧಿಸಿದ ಇತ್ತೀಚಿನ ನವೀಕರಣಗಳಿಗಾಗಿ ಎನ್‌ಟಿಎ ವೆಬ್‌ಸೈಟ್(ಗಳು) www.nta.ac.in ಮತ್ತು https://exams.nta.nic.in/cuet-pg/ ನೊಂದಿಗೆ ಸಂಪರ್ಕದಲ್ಲಿರಲು ಸೂಚಿಸಲಾಗಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

# ದ್ವೇಷ ಭಾಷಣ ಪ್ರತಿಬಂಧಕ ಕಾಯ್ದೆ: ರಾಜ್ಯಪಾಲರ ಭೇಟಿ- ಅಶೋಕ್

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಬೆಂಗಳೂರಿಗೆ ಬರುವುದನ್ನೆ ಬಿಟ್ಟಿದ್ದಾದರೆ ಎಂದು ವ್ಯಂಗ್ಯವಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಆಡಳಿತ ಸುವ್ಯವಸ್ಥೆ ಹಾಳಾಗಿದೆ ಈ ಸರ್ಕಾರ ಬಂದ ಮೇಲೆ ಅಪರಾಧ ಪ್ರಕರಣಗಳು ಹೆಚ್ಚಾಗಿವೆ ಎಂದು ಅವರು ದೂರಿದರು.

ಕಾಂಗ್ರೆಸ್‌ನಲ್ಲಿ ಆಂತರಿಕ ಕಿತ್ತಾಟ ಹೆಚ್ಚಿದೆ. ಮಾಜಿ ಸಚಿವ ರಾಜಣ್ಣ ಕಾಂಗ್ರೆಸ್‌ಗೆ ಕೊಳ್ಳಿ ಇಡುತ್ತಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೆಚ್ಚು ಸ್ಥಾನ ಗೆಲ್ಲಿಸುವಲ್ಲಿ ವಿಫಲರಾಗಿದ್ದಾರೆ ಎಂದು ಹೈಕಮಾಂಡ್‌ಗೆ ಪತ್ರ ಬರೆದಿದ್ದಾರೆ. ಹೈಕಮಾಂಡ್ ಸಹ ವೀಕಾಗಿದೆ. ರಾಜ್ಯದ ನಾಯಕರ ಸಹವಾಸವೇ ಬೇಡ ಎಂದಿದ್ದಾರೆ. ಕಾಂಗ್ರೆಸ್ ಸಂಪೂರ್ಣ ಒಡೆದ ಮನೆಯಾಗಿದೆ. ಇವರ ಕುರ್ಚಿ ಕಿತ್ತಾಟದಿಂದ ಸರ್ಕಾರ ಪಾಪರ್ ಆಗಿದೆ ಎಂದು ದೂರಿದರು.

ಮುಖ್ಯಮಂತ್ರಿ ಸಿದ್ಧರಾಮಯ್ಯ ಅಧಿಕಾರ ಕೊಡಲ್ಲ ಶಿವಕುಮಾರ್ ದೇವಸ್ಥಾನ ಬಿಡಲ್ಲ ಎಂದು ವ್ಯಂಗ್ಯವಾಡಿದ ಅವರು, ಸಿದ್ಧರಾಮಯ್ಯ ಗುಂಪು ಡಿನ್ನರ್ ರಾಜಕಾರಣ ಮಾಡುತ್ತಿದ್ದರೆ, ಡಿ.ಕೆ. ಶಿವಕುಮಾರ್ ಟೆಂಪರ್ ರನ್ ಮಾಡುತ್ತಿದ್ದಾರೆ. ಅವರು ಅಧಿವೇಶನ ನಡೆಯುತ್ತಿರುವ ಸಂದರ್ಭದಲ್ಲೇ ದೇವಸ್ಥಾನ ಸುತ್ತಿತ್ತಿದ್ದರು. ಡಿ.ಕೆ. ಶಿವಕುಮಾರ್ ಈಗ ಸಾಮಾನ್ಯ ಕಾರ್ಯಕರ್ತನಾಗಿ ನಾನು ಇರುತ್ತೇನೆ ಎಂದು ಹೇಳುತ್ತಾರೆ. ಅದು ಯಾಕೆ ರಾಜೀನಾಮೆ ಕೊಟ್ಟು ಇರಲಿ ಎಂದು ಅಶೋಕ್ ಹೇಳಿದರು.

## ವೀರಶೈವ ಲಿಂಗಾಯತ ಸಮಾಜದ ಪ್ರಭಾವಿ ನಾಯಕ ಸಚಿವ ಈಶ್ವರ ಖಂಡ್ರೆಗೆ ಸಿಎಂ ಸ್ಥಾನ ನೀಡಿ

**ಔರಾದ :ಡಿ.25-** ರಾಜ್ಯದಲ್ಲಿ ನಡೆಯುತ್ತಿರುವ ಸಿಎಂ ಕಿತ್ತಾಟ ಬದಿಗಿಟ್ಟು ಕಾಂಗ್ರೆಸ್ ಪಕ್ಷದಿಂದ ಕಲ್ಯಾಣ ಕರ್ನಾಟಕ ಭಾಗದ ಪ್ರಭಾವಿ ನಾಯಕ ಅಖಿಲ ಭಾರತ ವೀರಶೈವ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಅರಣ್ಯ ಖಾತೆ ಸಚಿವರಾದ ಈಶ್ವರ ಖಂಡ್ರೆ ಅವರಿಗೆ ಸಿಎಂ ಸ್ಥಾನ ನೀಡಬೇಕೆಂದು ವೀರಶೈವ ಲಿಂಗಾಯತ ಸಂಘಟನಾ ವೇದಿಕೆ ಅಧ್ಯಕ್ಷ ಆನಂದ ಪಿ.ದ್ಯಾಡೆ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಕಲ್ಯಾಣ ಕರ್ನಾಟಕ ಭಾಗದ ಪ್ರಭಾವಿ ನಾಯಕ ಈಶ್ವರ ಖಂಡ್ರೆ ಅವರು ಕರ್ನಾಟಕ ಮುಖ್ಯಮಂತ್ರಿ ಸ್ಥಾನಕ್ಕೆ ಸೂಕ್ತ ವ್ಯಕ್ತಿ, ಸತತ ನಾಲ್ಕು ಬಾರಿ ಶಾಸಕರಾಗಿ, ಸಚಿವರಾಗಿ ಕೆಲಸ ಮಾಡಿರುವ ಅವರು ಮುಖ್ಯಮಂತ್ರಿ ಸ್ಥಾನವನ್ನು ಸಮರ್ಥವಾಗಿ ನಿಭಾಯಿಸುತ್ತಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಈಶ್ವರ ಖಂಡ್ರೆ ಅವರು ತಮ್ಮ ಸಾಮಾಜಿಕ ಕಾರ್ಯಗಳಿಂದ ಜನಮನ ಗೆದ್ದ ವ್ಯಕ್ತಿ ಅವರು ಕರ್ನಾಟಕ ಮುಖ್ಯಮಂತ್ರಿ ಆಗಲಿ ಎಂಬುದು ಕಲ್ಯಾಣ ಕರ್ನಾಟಕ ಭಾಗದ ಜನರ ಆಶಯ.

ಈಶ್ವರ ಖಂಡ್ರೆ ಅವರದ್ದು ಕಾಂಗ್ರೆಸ್ ನಿಷ್ಠ ಮನೆತನ. ಮಾಜಿ ಸಚಿವ ಭೀಮಣ್ಣ ಖಂಡ್ರೆ ಮತ್ತು ದಿ.ವಿಜಯಕುಮಾರ ಖಂಡ್ರೆ ಅವರು ಕಾಂಗ್ರೆಸ್ಸಿಂದಲೇ ಶಾಸಕ, ಮಂತ್ರಿ ಆಗಿದ್ದರು. ತಂದೆ ಗರಡಿಯಲ್ಲಿ ಪಳಗಿರುವ ಈಶ್ವರ ಖಂಡ್ರೆ ಅವರೂ ಸಿದ್ದರಾಮಯ್ಯ ಸಂಪುಟದಲ್ಲಿ ಮಂತ್ರಿಯಾಗಿ ಉತ್ತಮವಾಗಿ ಜನಪರ ಕಾರ್ಯ ಮಾಡುತ್ತಿದ್ದಾರೆ. ಅಧಿಕಾರ ಇರಲಿ, ಇಲ್ಲದಿರಲಿ, ಖಂಡ್ರೆ ಪಕ್ಷನಿಷ್ಠರಾಗಿ ಕೆಲಸ ಮಾಡುತ್ತಿದ್ದಾರೆ. ಅಂತೆಯೇ ಭಾಲ್ಕಿ ಕ್ಷೇತ್ರದ ಜನತೆ ಖಂಡ್ರೆ ಮನೆತನದ ಕೈ ಬಿಟ್ಟಿಲ್ಲ ಎನ್ನುವುದೂ ಅಷ್ಟೇ ಸತ್ಯ. ಉತ್ತಮ ವಾಗ್ಮಿಯಾಗಿರುವ ಈಶ್ವರ ಖಂಡ್ರೆ ಅವರಲ್ಲಿ ಸಂಘಟನಾ ಚತುರತೆ, ಸಾಮರ್ಥ್ಯ ಇದೆ. ಈ ಹಿಂದೆ ಲೋಕಸಭಾ ಚುನಾವಣೆ ವೇಳೆ ಕಲ್ಯಾಣ ಕರ್ನಾಟಕದಲ್ಲಿ ಕಾಂಗ್ರೆಸ್ ಸಂಸದರನ್ನು ಗೆಲ್ಲಿಸಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ, ಅಲ್ಲದೆ ವೀರಶೈವ- ಲಿಂಗಾಯತ ಸಮುದಾಯದ ಪ್ರಬಲ ನಾಯಕತ್ವದ ಗುಣಗಳೂ ಅವರಲ್ಲಿವೆ. ಎಲ್ಲ ಸಮುದಾಯಗಳನ್ನು ಒಟ್ಟಿಗೆ ಕೊಂಡೊಯ್ಯುವ ಶಕ್ತಿ ಇರುವ ನಾಯಕ ಈಶ್ವರ ಖಂಡ್ರೆ ಅವರಿಗೆ ಸಿಎಂ ಸ್ಥಾನ ನೀಡಿದರೆ ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಅವರನ್ನು ಮುಖ್ಯಮಂತ್ರಿ ಮಾಡುವ ಮೂಲಕ ರಾಜ್ಯದ ವೀರಶೈವ ಲಿಂಗಾಯತ ಸಮಾಜದ ಬೇಡಿಕೆ ಈಡೇರಿಸಿದಂತಾಗುತ್ತದೆ ಎಂದು ಔರಾದ ವೀರಶೈವ ಲಿಂಗಾಯತ ಸಂಘಟನಾ ವೇದಿಕೆ ಅಧ್ಯಕ್ಷ ಆನಂದ ಪಿ.ದ್ಯಾಡೆ ಅವರು ಒತ್ತಾಯಿಸಿದ್ದಾರೆ.

# ಹಿರಿಯ ನಾಗರಿಕರೊಂದಿಗೆ ವಿಶೇಷವಾಗಿ ಪುತ್ರನ ಹುಟ್ಟು ಹಬ್ಬ ಆಚರಣೆ



**ಮಾನ್ವಿ,ಡಿ.24-:** ಪಟ್ಟಣದ ನೇರಳು ಹಿರಿಯ ನಾಗರಿಕರ ಮನೆಯಲ್ಲಿ ಹಿರಿಯ ಪತ್ರಕರ್ತರಾದ ರಾಮಂಜನೇಯ್ಯ ಹಾಗೂ ಸುಧ ದಂಪತಿಗಳು ಭಾರತ ಸೇನೆಯಲ್ಲಿ ವೈದ್ಯರಾಗಿ ದೇಶದ ಜಮ್ಮುವಿನಲ್ಲಿ ಸೇವೆಸಲ್ಲಿಸುತ್ತಿರುವ ತಮ್ಮ ಪುತ್ರ ಡಾ.ಸಿ.ಅನಿರುದ್ದ ರವರ ಹುಟ್ಟು ಹಬ್ಬವನ್ನು ಹಿರಿಯ ನಾಗರಿಕರೊಂದಿಗೆ ವಿಶೇಷವಾಗಿ ಆಚರಿಸಿದರು.

ನೆರಳು ಹಿರಿಯ ನಾಗರಿಕರ ಮನೆಯಲ್ಲಿನ ಹಿರಿಯ ನಾಗರಿಕರಿಗೆ ಸಿಹಿ ಊಟವನ್ನು ನೀಡುವ ಮೂಲಕ ಆಚರಿಸಿದರು.

ಕ.ಸಾ.ಪ. ಜಿಲ್ಲಾ ಗೌ.ಕಾರ್ಯದರ್ಶಿ ತಾಯಪ್ಪ ಬಿ.ಹೋಸೂರು,ಸೇರಿದಂತೆ ಪತ್ರಿಕಾ ಛಾಯ ಗ್ರಾಹಕರಾದ ಶಿವಕುಮಾರ ಹಾಗೂ ನೇರಳು ಹಿರಿಯ ನಾಗರಿಕರ ಮನೆಯ ವ್ಯವಸ್ಥಾಪಕರು ಇದ್ದರು.

# ಪಿಯು ಫಲಿತಾಂಶ ಬಲವರ್ಧನೆ, ವೃತ್ತಿ ಮಾರ್ಗದರ್ಶನ ಕುರಿತು ಕಾರ್ಯಾಗಾರ



ಯುವಮಾರ್ಗ ಸುದ್ದಿ

**ಸಿರವಾರ, ಡಿ.23-**ಜಿಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ತಾಲೂಕ ಪಂಚಾಯತ ಸಿರವಾರ ಇವರ ಸಂಯುಕ್ತಾಶ್ರಯದಲ್ಲಿ ತಾಲೂಕಿನ ಬಾಗಲವಾಡ ಗ್ರಾಮದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪಿಯು ಫಲಿತಾಂಶ ಬಲವರ್ಧನೆ ಹಾಗೂ ವೃತ್ತಿ ಮಾರ್ಗದರ್ಶನ ಕುರಿತು ಕಾರ್ಯಾಗಾರ ಹಮ್ಮಿಕೊಳ್ಳಲಾಯಿತು.

ಎ.ಬಿ.ಎಫ್ ತಾಲೂಕ ಸಂಯೋಜಕರಾದ ಡಾ.ಜ್ಞಾನಸುಂದರಿ ಮಾತನಾಡಿ, ನೀತಿ ಆಯೋಗದ ಮಹತ್ವಾಕಾಂಕ್ಷೀ ಜಿಲ್ಲಾ ಮತ್ತು ತಾಲ್ಲೂಕ ಅಭಿವೃದ್ಧಿ ಕಾರ್ಯಕ್ರಮದ ಅಡಿಯಲ್ಲಿ ಗ್ರಾಮೀಣ ಭಾಗದಲ್ಲಿ ಪಿಯು ಫಲಿತಾಂಶ ಹೆಚ್ಚಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳು ವಾರ್ಷಿಕ ಪರೀಕ್ಷೆಯಲ್ಲಿ ಶೇ60 ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆಯುವ ಸೂಚಾಂಕಗಳ ಬಲವರ್ಧನೆಗಾಗಿ ಒತ್ತು ನೀಡಲು ಈ ಕಾರ್ಯಾಗಾರ ಆಯೋಜಿಸಲಾಗಿದೆ ಎಂದರು. ಎನ್.ಆರ್.ಎಲ್.ಎಂ ತಾಲೂಕ ವ್ಯವಸ್ಥಾಪಕ ಡಾ. ಶಿವರಾಜ್ ಮಾತನಾಡಿ, ಪಿಯು ನಂತರ ಲಭ್ಯವಿರುವ ಉತ್ತಮ ಕೋರ್ಸ್‌ಗಳ ಆಯ್ಕೆ, ಅವಧಿ, ಪ್ರತಿಯೊಬ್ಬರ ಜೀವನದಲ್ಲಿ ಶಿಕ್ಷಣದ ಪ್ರಾಮುಖ್ಯತೆ, ಗ್ರಾಮೀಣ ಭಾಗದಲ್ಲಿನ ವಿದ್ಯಾರ್ಥಿಗಳಿಗೆ ವೃತ್ತಿ ಜೀವನ ಕೌಶಲ್ಯ ಅಗತ್ಯತೆ, ಜೀವನದಲ್ಲಿ ಉತ್ತಮ ಉದ್ದೇಶ ಹಾಗೂ ಮಾನವೀಯತೆ ಮೈಗೂಡಿಸಿಕೊಳ್ಳುವ ಕೋರ್ಸುಗಳ ವೆಚ್ಚ ಫಲಿತಾಂಶ ಕೊರತೆಯ ವಿದ್ಯಾರ್ಥಿಗಳಿಗ ಜೀವನ ವೃದ್ಧಿಗಾಗಿ ಲಭ್ಯವಿರುವ ಕೌಶಲ್ಯಾಧಾರೀತ ತರಬೇತಿಗಳ ಮಾಹಿತಿ ಕುರಿತು ತಿಳಿಸಿದರು.

ಕಾಲೇಜಿನ ಪ್ರಾಂಶುಪಾಲ ಕಸ್ತೂರೆಪ್ಪ ಶೆಟ್ಟಿ ಮಾತನಾಡಿ, ಮಕ್ಕಳಲ್ಲಿ ಶಿಕ್ಷಣ ಸಂವೃದ್ಧಿಯಲ್ಲಿ ಏಕಾಗ್ರತೆ, ಧೃಡನಿರ್ಧಾರ, ಸತತ ಪ್ರಯತ್ನ, ನಿರಂತರ ಅಭ್ಯಾಸ ಎಲ್ಲವೂ ಪ್ರಮುಖ ಮೆಟ್ಟಿಲುಗಳು ಎಂದರು.

ಈ ಸಂದರ್ಭದಲ್ಲಿ ಗಂಗಮ್ಮ, ಪಂಪಮ್ಮ ಹಾಗೂ ಉಪನ್ಯಾಸಕ ಗುರುಬಸವ, ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನರೇಗಾ ಹೆಸರು ಬದಲಾವಣೆ ವಿರೋಧಿಸಿ ಕಾಂಗ್ರೆಸ್ ಪ್ರತಿಭಟನೆ

**ವಿಜಯನಗರ, ಡಿ.24-** ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದಿಂದ ಜಾರಿ ನಿರ್ದೇಶನಾಲಯವನ್ನು ದುರುಪಯೋಗವಾ ಗಿದೆ ಹಾಗೂ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಹೆಸರು ಮತ್ತು ಸ್ವರೂಪ ಬದಲಾಯಿಸಿರುವ ಕೇಂದ್ರ ಸರ್ಕಾರದ ಕ್ರಮವನ್ನು ಖಂಡಿಸಿ ಹೊಸಪೇಟೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ಅಂಬೇಡ್ಕರ್ ಸರ್ಕಲ್‌ನಲ್ಲಿ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಷಾ ವಿರುದ್ಧ ಧಿಕ್ಕಾರ ಕೂಗಿ, ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಸಚಿವ ಪಿ.ಟಿ.ಪರಮೇಶ್ವರ ನಾಯ್ಕ್, ಕೂಡ್ಲಿಗಿ ಶಾಸಕ ಡಾ.ಎನ್.ಟಿ. ಶ್ರೀನಿವಾಸ ಹಾಗೂ ಜಿಲ್ಲಾಧ್ಯಕ್ಷ ಸಿರಾಜ್ ಶೇಖ್, ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದ ಕಾಂಗ್ರೆಸ್ ನಾಯಕರ ವಿರುದ್ಧ ಒಂದಿಲ್ಲೊಂದು ಷಡ್ಯಂತ್ರ ರೂಪಿಸುತ್ತಲೇ ಇದೆ.

ದೇಶದ ಸ್ವತಂತ್ರಪೂರ್ವದಲ್ಲಿ ಜನರಲ್ಲಿ ದೇಶಾಭಿಮಾನವನ್ನು ಜಾಗೃತಿಗೊಳಿಸುವಲ್ಲಿ ನ್ಯಾಷನಲ್ ಹೆರಾಲ್ಡ್ ಪತ್ರಿಕೆಯನ್ನು ವಿನಾಕಾರಣ ವಿವಾದಕ್ಕೆ ಸಿಲುಕಿಸಿ, ಕಾಂಗ್ರೆಸ್ ವರಿಷ್ಠರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ವಿರುದ್ಧದ ಇಡಿ ತನಿಖೆಗೆ ಮುಂದಾಗಿತ್ತು. ಆದರೆ, ಕೇಂದ್ರ ಸರ್ಕಾರದ ಈ ದುಸ್ಸಾಹಸವನ್ನು ಸುಪ್ರೀಂ ಕೋರ್ಟ್ ಛೀಮಾರಿ ಹಾಕಿದೆ. ಇದರಿಂದ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ನಡೆ ಏನು ಎಂಬುದು ಬಹಿರಂಗವಾಗಿದೆ ಎಂದು ತಿಳಿಸಿದರು.

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಹೆಸರು ಮತ್ತು ಸ್ವರೂಪ ಬದಲಾವಣೆ ಕೈಬಿಡಬೇಕು. ನ್ಯಾಷನಲ್ ಹೆರಾಲ್ಡ್ ಪತ್ರಿಕೆ ವಿರುದ್ಧ ದಾಖಲಿಸಿರುವ




ಪ್ರಕರಣ ದುರುದ್ದೇಶಪೂರಿತವಾಗಿದ್ದು, ಅದನ್ನು ಕೈಬಿಡಬೇಕು ಎಂದು ಆಗ್ರಹಿಸಿದರು.

ಎಐಸಿಸಿ ಕಾರ್ಯದರ್ಶಿ ಗೋಪಿನಾಥ್ ಪಳನಿಯಪ್ಪ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಧಾಕರ ಬಡಿಗೇರ, ಜಿಲ್ಲಾ ಉಪಾಧ್ಯಕ್ಷ ಕೆ.ಎಂ.ಹಾಲಪ್ಪ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಿಂಬಗಲ್ ರಾಮಕೃಷ್ಣ, ಜಿಲ್ಲಾ ಉಪಾಧ್ಯಕ್ಷ ಕೆ.ರಮೇಶ್, ಕೆಪಿಸಿಸಿ ಮಾಧ್ಯಮ ಸಂಯೋಜಕ ಇರ್ಫಾನ್ ತೂಫಾನ್, ಹುಡಾ ಅಧ್ಯಕ್ಷ ಎಚ್.ಎನ್. ಇಮಾಮ್ ನಿಯಾಜಿ, ಜಿಲ್ಲಾ ವಕ್ಫ್ ಸಲಹಾ ಸಮಿತಿ ಜಿಲ್ಲಾಧ್ಯಕ್ಷ ಕೆ.ಎಸ್.ದಾದಾಪೀರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿನಾಯಕ ಶೆಟ್ಟರ್, ಕಮಲಾಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಖಾಜಾ ಹುಸೇನ್, ಸೋಮಶೇಖರ್ ಬಣ್ಣದಮನೆ ಸೇರಿದಂತೆ ವಿವಿಧ ಬ್ಲಾಕ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಯುವ ಮಾರ್ಗ
www.yuvamarga.com Yuva Marga yuva_marga_

# ಶಾಸಕ ಭೈರತಿ ಬಸವರಾಜ್ ಪತ್ತೆಗೆ ತೀವ್ರ ಶೋಧ

**ಬೆಂಗಳೂರು,ಡಿ.24–** ರೌಡಿ ಬಿಕ್ಲು ಶಿವ ಕೊಲೆ ಪ್ರಕರಣ ಸಂಬಂಧ ತಲೆಮರೆಸಿಕೊಂಡಿರುವ ಶಾಸಕ ಹಾಗೂ ಮಾಜಿ ಸಚಿವ ಭೈರತಿ ಬಸವರಾಜ್ ಅವರಿಗೆ ಕಳೆದ ಐದು ದಿನಗಳಿಂದ ಸಿಐಡಿ ಅಧಿಕಾರಿಗಳು ತೀವ್ರ ಹುಡುಕಾಟ ನಡೆಸಲಾಗಿದೆ.

ಗೋವಾ, ಮಹಾರಾಷ್ಟ್ರ ಭಾಗದಲ್ಲಿ ಹುಡುಕಾಟ ನಡೆಸಿದ್ದು, ಎಲ್ಲಿಯೂ ಭೈರತಿ ಬಸವರಾಜ್ ಪತ್ತೆಯಾಗಿಲ್ಲ. ಪುಣೆಯಲ್ಲಿ ಕೊನೆಯದಾಗಿ ಅವರ ಮೊಬೈಲ್ ಸ್ವಿಚ್ ಆಪ್ ಆಗಿದ್ದು, ಇದಾದ ಬಳಿಕ ಗೋವಾ ಕಡೆಗೆ ಪ್ರಯಾಣ ಮಾಡಿರುವುದು ಬೆಳಕಿಗೆ ಬಂದಿದೆ. ಬಳಿಕ ಎಲ್ಲಿ ಇದ್ದಾರೆ ಎನ್ನುವುದು ಪತ್ತೆಯಾಗಿಲ್ಲ.

ಭೈರತಿ ಬಸವರಾಜ್ ಅವರ ಜಾಮೀನು ಅರ್ಜಿಯು ನಿನ್ನೆ ಜನಪ್ರತಿನಿಧಿಗಳ ಕೋರ್ಟ್‌ನಲ್ಲಿ ನಿರೀಕ್ಷಣಾ ವಜಾಗೊಂಡಿತ್ತು. ನಿರೀಕ್ಷಣಾ ಜಾಮೀನು ವಜಾ ಬೆನ್ನಲ್ಲೇ ಸಿಐಡಿ ಎಸ್‌ಐಟಿ ಟೀಂ ಮಾಜಿ ಸಚಿವರ ವಿರುದ್ಧ ಲುಕ್ ಔಟ್ ನೋಟಿಸ್ ಜಾರಿ ಮಾಡಿದ್ದಾರೆ.ಕಳೆದ ಜುಲೈ 15ರ ರಾತ್ರಿ ಬಿಕ್ಲು ಶಿವನನ್ನು ಹತ್ಯೆ ಮಾಡಲಾಗಿತ್ತು, ಆತನ ವಿರುದ್ಧ ಭಾರತಿನಗರ ಪೊಲೀಸ್ ಠಾಣೆಯಲ್ಲಿ 11ಕ್ಕೂ ಹೆಚ್ಚು ಕ್ರಿಮಿನಲ್ ಪ್ರಕರಣಗಳು ದಾಖಲಾಗಿದ್ದವು.

ಜು.15ರ ರಾತ್ರಿ ಬೆಂಗಳೂರಿನ ಹಲಸೂರು (ಭಾರತಿನಗರ) ಪ್ರದೇಶದ ಮೀನಿ ಅವೆನ್ಯೂ ರಸ್ತೆಯಲ್ಲಿ ಆತನ ಮನೆ ಬಳಿ 8–12 ಜನರ ಗುಂಪು ಮಾರಕ ಆಯುಧಗಳಿಂದ ಕೊಚ್ಚಿ, ಬರ್ಬರವಾಗಿ ಹತ್ಯೆ ಮಾಡಿತ್ತು.

ಹತ್ಯೆಯು ಆತನ ತಾಯಿ ಎದುರು ನಡೆದಿದ್ದು, ದಾಳಿಯ



ವಿಡಿಯೋಗಳು ಸಹ ಬಯಲಾಗಿವೆ. ಬಿಕ್ಲು ಶಿವನ ತಾಯಿ ವಿಜಯಲಕ್ಷ್ಮಿ ದೂರು ಆಧರಿಸಿ ಭಾರತಿನಗರ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಾಯಿತು.

ಭೈರತಿ ಬಸವರಾಜ್ ಎ5:

ಇದರಲ್ಲಿ ಕೆಆರ್ ಪುರ ಕ್ಷೇತ್ರದ ಬಿಜೆಪಿ ಶಾಸಕ ಮತ್ತು ಮಾಜಿ ಸಚಿವ ಭೈರತಿ ಬಸವರಾಜ್ ಅವರನ್ನು ಎ5 ಆರೋಪಿಯಾಗಿ ಹೆಸರಿಸಲಾಗಿದೆ ಬಿಕ್ಲು ಶಿವ ಹತ್ಯೆಗೆ ಪ್ರೇರಣೆ ನೀಡಿದ ಆರೋಪ ಭೈರತಿ ಬಸವರಾಜ್ ಮೇಲಿದೆ. ಈ ಕೇಸ್‌ನಲ್ಲಿ ಭೈರತಿ ಬಸವರಾಜ್ ಆಪ್ತ ಜಗದೀಶ್ ಅಲಿಯಾಸ್ ಜಗ್ಗ ಎ1 ಆಗಿದ್ದರೆ ಕಿರಣ್ ಸೇರಿದಂತೆ ಹಲವರ ಹೆಸರಿದೆ.

# ಕೇಂದ್ರದಿಂದ ಮ್ಯಾಚಿಂಗ್ ಗ್ರ್ಯಾಂಟ್ ಬಿಡುಗಡೆಗೆ ವಿಳಂಬ:ಶೀಘ್ರವೇ ಕೇಂದ್ರಕ್ಕೆ ನಿಯೋಗ ಕರೆದೊಯ್ಯಲಾಗುವುದು:ಡಾ.ಅಜಯ್ ಸಿಂಗ್

**ಕಲಬುರಗಿ,ಡಿ.24–** ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗೆ ಸಂವಿಧಾನಕ್ಕೆ ತಿದ್ದುಪಡಿ ತಂದು 371ಜೆ ಕಾಯ್ದೆ ವಿಶೇಷ ಮೀಸಲಾತಿ ತಂದು ಆರೋಗ್ಯ, ಶಿಕ್ಷಣ ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿಗೆ ರಾಜ್ಯ ಸರ್ಕಾರ ಒಂದೆಡೆ ಪಣ ತೊಟ್ಟಿದರೆ, ಅತ್ತ ಕೇಂದ್ರ ಸರ್ಕಾರ ಮ್ಯಾಚಿಂಗ್ ಗ್ರ್ಯಾಂಟ್ ನೀಡದೆ ವಿಳಂಬ ಧೋರಣೆ ತೋರುತ್ತಿದೆ ಎಂದು ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್ ಅವರು ಹೇಳಿದರು.

ಕೆ.ಕೆ.ಆರ್.ಡಿ.ಬಿ. ಮಂಡಳಿ ಸಭಾಂಗಣದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರಪತಿ, ಪ್ರಧಾನಮಂತ್ರಿ, ಹಣಕಾಸು ಸಚಿವರಿಗೆ ಹಲವಾರು ಬಾರಿ ಸಿ.ಎಂ. ಅವರು ಪತ್ರ ಬರೆದಿದ್ದಾರೆ. ಇದಲ್ಲದೆ ಖುದ್ದಾಗಿ ಭೇಟಿಯಾಗಿ ಮನವರಿಕೆ ಮಾಡಿದ್ದರು ಇದೂವರೆಗೆ ಅನುದಾನ ಬಂದಿಲ್ಲ. ಹೀಗಾಗಿ

ಸಿ.ಎಂ. ಅವರೊಂದಿಗೆ ಚರ್ಚಿಸಿ ಸರ್ವಪಕ್ಷ ನಿಯೋಗ ತೆಗೆದುಕೊಂಡು ಹೋಗಲು ಶೀಘ್ರ ದಿನಾಂಕ ನಿಗದಿಪಡಿಸಲಾಗುವುದು ಎಂದರು.

2013–14 ರಿಂದ 2025–26ನೇ ಸಾಲಿನ ವರೆಗೆ ರಾಜ್ಯ ಸರ್ಕಾರದಿಂದ ಕೆ.ಕೆ.ಆರ್.ಡಿ.ಬಿ ಮಂಡಳಿಗೆ 24,878 ಕೋಟಿ ರೂ. ಅನುದಾನ ಹಂಚಿಕೆ ಮಾಡಿದ್ದು, ಇದೇ ಮೊತ್ತವನ್ನು ಮಹಾರಾಷ್ಟ್ರದ ವಿದರ್ಭ ಮಾದರಿಯಲ್ಲಿ ಕೇಂದ್ರ ಸರ್ಕಾರ ಕೆ.ಕೆ.ಆರ್.ಡಿ.ಬಿ. ಮಂಡಳಿಗೆ ನೀಡಬೇಕು. ಕೇಂದ್ರದಿಂದ ಅನುದಾನ ಬಂದಲ್ಲಿ ಪ್ರದೇಶದಲ್ಲಿ ಇನ್ನು ಹಚ್ಚಿನ ಅಭಿವೃದ್ಧಿ ಕೆಲಸ ಕಾರ್ಯಗಳು ಮಾಡಲು ಸಾಧ್ಯವಾಗಲಿದೆ ಎಂದರು.

ಶಿಕ್ಷಣ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆ ತರುವ ನಿಟ್ಟಿನಲ್ಲಿ ಡಾ.ಛಾಯಾ ದೇಗಾಂವಕರ್ ನೇತೃತ್ವದ ತಜ್ಞರ ಸಮಿತಿ ಈಗಾಗಲೆ ಕಳೆದ ಡಿ.16 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬೆಳಗಾವಿಯಲ್ಲಿ ಭೇಟಿ ಮಾಡಿ ವರದಿ ಸಲ್ಲಿಸಿದ್ದು, ಕೆ.ಪಿ.ಎಸ್. ಶಾಲೆ ನಿರ್ಮಾಣ, ದ್ವಿಭಾಷಾ ಪದ್ಧತಿ ಬೋಧನೆ, ಶಿಕ್ಷಣದಲ್ಲಿ ಗುಣಮಟ್ಟ, ಶಿಕ್ಷಕರ ಕೊರತೆ ನೀಗಿಸುವ ಸಂಬಂಧ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವರದಿಯಲ್ಲಿ ಉಲ್ಲೇಖಿಸಲಾಗಿದೆ ಎಂದರು.

ಪ್ರಸ್ತುತ ರಾಜ್ಯದಲ್ಲಿ 247 ಕೆ.ಪಿ.ಎಸ್. ಶಾಲೆಯಲ್ಲಿ ಕಲ್ಯಾಣದಲ್ಲಿರುವುದು ಕೇವಲ 60 ಶಾಲೆ. ಹೀಗಾಗಿ ಮುಂದಿನ ಒಂದು ವರ್ಷದಲ್ಲಿ ಮಂಡಳಿಯಿಂದ 200, ಶಿಕ್ಷಣ ಇಲಾಖೆಯಿಂದ 100 ಶಾಲೆಗಳು ಈ ಭಾಗದಲ್ಲಿ ತಲೆ ಎತ್ತಲಿವೆ. ಎಸ್.ಎಸ್.ಎಲ್.ಸಿ. ಪರೀಕ್ಷೆ ಸುಧಾರಣೆಗೆ 3.44 ಕೋಟಿ ರೂ. ಖರ್ಚು ಮಾಡಲಾಗುತ್ತಿದೆ. ಇದರಲ್ಲಿ ಪ್ರತಿ ತಾಲೂಕಿಗೆ 25 ಲಕ್ಷ ವ್ಯಯ ಮಾಡಲಾಗುತ್ತಿದೆ. 5,530 ಸಮಶಿಕ್ಷಕರ ಭರ್ತಿ ಕಾರ್ಯ ನಡೆದಿದೆ. ಪ್ರಸಕ್ತ 2025–26ನೇ ಸಾಲಿನಲ್ಲಿ ಮಾರ್ಚ್ 31 ರೊಳಗೆ 4,000 ಕೋಟಿ ರೂ. ಹಣ ಖರ್ಚು ಮಾಡುವ ಮೂಲಕ ಅನುದಾನ ಖರ್ಚಿನಲ್ಲಿ ಹಿಸ ದಾಖಲೆ ಬರೆಯಲಾಗುವುದು ಎಂದು ಡಾ. ಅಜಯ್ ಸಿಂಗ್ ತಿಳಿಸಿದರು.

**ಮಲತಾಯಿ ಧೋರಣೆ,ಕೇಂದ್ರದಿಂದ ಬರಬೇಕಿದೆ 1.25 ಲಕ್ಷ**



**ಕೋಟಿ–**ಕೇಂದ್ರ ಸರ್ಕಾರವು 15ನೇ ಹಣಕಾಸು, ಭದ್ರಾ ಮೇಲ್ದಂಡೆ ಯೋಜನೆ ಸೇರಿದಂತೆ ವಿವಿಧ ಯೋಜನೆಗಳಿಗೆ ರಾಜ್ಯಕ್ಕೆ ಹಂಚಿಕೆಯಾದ 1.25 ಲಕ್ಷ ಕೋಟಿ ರೂ. ಬಿಡುಗಡೆ ಬಿಡುಗಡೆ ಮಾಡದೆ ಮಲತಾಯಿ ಧೋರಣೆ ಅನುಸರಿಸುತ್ತಿದೆ. ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಿಸಿದ 5,300 ಕೋಟಿ ರೂ., ಬೆಂಗಳೂರು ಅಭಿವೃದ್ಧಿ ಘೋಷಿಸಿದ 6,000 ಕೋಟಿ ರೂ., 15ನೇ ಹಣಕಾಸಿನಡಿ ಹಂಚಿಕೆ ಮಾಡಿದ ವಿಶೇಷ ಅನುದಾನ 5,495 ಕೋಟಿ ರೂ. ಗಳಲ್ಲಿ ಒಂದು ರೂಪಾಯಿ ಸಹ ಅನುದಾನ ನೀಡಿಲ್ಲ.

ಇದಲ್ಲದೆ 15ನೇ ಹಣಕಾಸು ಆಯೋಗದಲ್ಲಿನ ಆರೋಗ್ಯ ಕ್ಷೇತ್ರಕ್ಕೆ ಹಂಚಿಕೆ ಮಾಡಿದ ಅನುದಾನದಲ್ಲಿ 874 ಕೋಟಿ ರೂ., ಗ್ರಾಮೀಣ ಸ್ಥಳೀಯ ಸಂಸ್ಥೆಗೆ ಹಂಚಿಕೆ ಮಾಡಿದರಲ್ಲಿ 774 ಕೋಟಿ ರೂ., ನಗರ–ಸ್ಥಳೀಯ ಸಂಸ್ಥೆಗಳಿಗೆ ಶಿಫಾರಸ್ಸು ಮಾಡಿದ 1,028 ಕೋಟಿ ರೂ., ತೆರಿಗೆ ಸೂತ್ರ ಬದಲಾವಣೆಯಿಂದ ನಷ್ಟ 80,000 ಕೋಟಿ ರೂ., ಎನ್.ಡಿ.ಆರ್.ಎಫ್ ನಡಿ 7,254 ಕೋಟಿ ರೂ., ಕೇಂದ್ರ ಪುರಸ್ಕೃತ ಯೋಜನೆಗಳಿಗೆ 10,524, ಸೆಸ್ ಮತ್ತು ಸರ್ಚಾರ್ಜ್ ನಿಂದ 8,300 ಕೋಟಿ ರೂ. ಸೇರಿ ಒಟ್ಟಾರೆ ಕಳೆದ 5 ವರ್ಷದಲ್ಲಿ ರಾಜ್ಯಕ್ಕೆ 1,25,559 ಕೋಟಿ ರೂ. ಹಣ ಕೇಂದ್ರದಿಂದ ಬರಬೇಕಿದೆ ಎಂದಯ ಅಂಕಿ–ಸಂಕ್ಯೆಯೊಂದಿಗೆ ಅಧ್ಯಕ್ಷರು ವಿವರಿಸಿದರು.

ಹಿಂದಿನ ಯು.ಪಿ.ಎ. ಸರ್ಕಾರ ಜಾರಿಗೆ ತಂದ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಗೆ ರಾಷ್ಟ್ರಪಿತ ಮಹಾತ್ಮ ಗಾಂಧಿ ಹೆಸರಿಡಲಾಗಿತ್ತು. ಆದರೆ ಇತ್ತೀಚೆಗೆ ಕೇಂದ್ರ ಸರ್ಕಾರವು ವಿಬಿ–ಜಿ–ರಾಮ್–ಜಿ ಹೆಸರಿಡುವ ಮೂಲಕ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರಿಗೆ ಅವಮಾನ ಮಾಡಿದೆ. ಅಲ್ಲದೆ ಕಾಯ್ದೆ ತಿದ್ದುಪಡಿ ತಂದು 60–40 ಮಾದರಿಯಲ್ಲಿ ಕೇಂದ್ರ–ರಾಜ್ಯ ಸರ್ಕಾರ ಅನುದಾನ ಭರಿಸಬೇಕೆಂದು ತಿಳಿಸಲಾಗಿದೆ. ಹಿಂದೆಲ್ಲ ಕೇಂದ್ರವೇ ಶೇ.100 ಅನುದಾನ ಭರಿಸುತ್ತಿತ್ತು. ಇದು ರಾಜ್ಯಗಳಿಗೆ ಮಾರಕವಾದ ನಿರ್ಣಯವಾಗಿದೆ. ಕೇಂದ್ರದ ಎನ್.ಡಿ.ಎ. ಸರ್ಕಾರವು ದೇಶದ ಬಡ ಜನರ ಕಲ್ಯಾಣ, ಉದ್ಯೋಗ ನೀಡುವ ಬದಲು ಕೇವಲ ಯೋಜನೆಗಳಿಗೆ ಹೆಸರು ಬದಲಾವಣೆ ಮಾಡುವಲ್ಲಿ ತಲ್ಲಿನವಾಗಿದೆ ಎಂದರು.

# ದೆಹಲಿಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಸಭೆ




**ಕಲಬುರಗಿ,ಡಿ.24–**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ನವದೆಹಲಿಯ ಕರ್ನಾಟಕ ಭವನದಲ್ಲಿ ಕಳೆದ 20 ವರ್ಷಗಳಿಂದ ಮನರೇಗಾ ರಚನೆ, ಅನುಷ್ಠಾನ ಮತ್ತು ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕೆಲಸ ಮಾಡಿದ ಎಲ್ಲಾ ಸಂಬಂಧಿತ ಪಾಲುದಾರರು ಮತ್ತು ತಜ್ಞರೊಂದಿಗೆ ನಡೆಸಿದ ದುಂಡು ಮೇಜಿನ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯನ್ನು ಕೇಂದ್ರ ಸರ್ಕಾರವು ಏಕಪಕ್ಷೀಯವಾಗಿ ರದ್ದುಗೊಳಿಸಿದ ನಂತರದ ಕೈಗೊಳ್ಳಬೇಕಿರುವ ಕ್ರಮಗಳ ಕುರಿತು, ದೇಶದಲ್ಲೇ ಮೊದಲ ಪ್ರಯತ್ನದಲ್ಲಿ, ಕರ್ನಾಟಕ ಸರ್ಕಾರವು ಈಗ ಈ ಉತ್ಪಾದಕ ಸಭೆಯ ಮೂಲಕ ಸ್ಥಳೀಯ ಆಡಳಿತ ಮತ್ತು ಬೇಡಿಕೆ ಆಧಾರಿತ ಜೀವನೋಪಾಯ ಮತ್ತು ಉದ್ಯೋಗದ ಹಕ್ಕನ್ನು ನಾಶಮಾಡುವ ಗುರಿಯನ್ನು ಹೊಂದಿರುವ ವಿಬಿ–ಜಿ ರಾಮ್ ಜಿ ಅನ್ನು ವಿರೋಧಿಸುವ ಪ್ರಕ್ರಿಯೆಯನ್ನು ರೂಪುಗೊಳಿಸಲು ಮಹತ್ವದ ಹೆಜ್ಜೆಯಿರಿಸಿದೆ.

# ಹೈಕಮಾಂಡ್ ವಿರುದ್ಧ ಡಿ.ಕೆ.ಶಿವಕುಮಾರ್ ಬೇಸರ

**ನವದೆಹಲಿ, ಡಿ.24–** ಅಧಿಕಾರ ಹಂಚಿಕೆಯ ವಿಷಯದಲ್ಲಿ ಹೈಕಮಾಂಡ್ ನಾಯಕರ ಅನಾದಾರಣೆಯಿಂದ ಬೇಸರಗೊಂಡಿರುವ ಡಿಸಿಎಂ ಡಿ.ಕೆ.ಶಿವಕುಮಾರ್, ತಮಗೆ ಉಪ ಮುಖ್ಯಮಂತ್ರಿ ಹುದ್ದೆಗಿಂತ ಸಾಮಾನ್ಯ ಕಾರ್ಯ ಕರ್ತನಾಗಿ ಇರುವುದರಲ್ಲೆ ಹೆಚ್ಚು ಖುಷಿ ಇದೆ ಎಂದು ಹೇಳುವ ಮೂಲಕ ಪರೋಕ್ಷವಾಗಿ ಎಚ್ಚರಿಕೆಯ ಸಂದೇಶ ರವಾನಿಸಿದ್ದಾರೆ.

ದೆಹಲಿ ಪ್ರವಾಸದಲ್ಲಿರುವ ಅವರು ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿ, ಹೈಕಮಾಂಡ್ ವಿರುದ್ಧ ಯಾವುದೇ ಅಸಮಾಧಾನ ವ್ಯಕ್ತಪಡಿಸದೆ ಎಲ್ಲವೂ ಸರಿ ಇದೆ ಎಂದು ಹೇಳುತ್ತಲೇ ತಮ ಅಸಹನೆ

ಯನ್ನು ಹೊರಹಾಕಿದ್ದಾರೆ. ಹೈಕಮಾಂಡ್ ನಾಯಕರು ತಮಗೆ ಹಾಗೂ ಸಿಎಂ ಸಿದ್ದರಾಮಯ್ಯ ಅವರಿಗೆ ಮುಕ್ತ ಅವಕಾಶಗಳನ್ನು ನೀಡಿದ್ದಾರೆ.

ಇದನ್ನು ಸದುಪಯೋಗ ಪಡಿಸಿಕೊಳ್ಳುತ್ತೇವೆ. ನನಗೆ 5 ವರ್ಷ ಉಪಮುಖ್ಯಮಂತ್ರಿಯಾಗಿರಬೇಕು ಎಂಬ ಇರಾದೆ ಇಲ್ಲ. 1980ರಿಂದಲೂ ಪಕ್ಷದ ಕಾರ್ಯಕರ್ತನಾಗಿದ್ದೇನೆ. ಅದು ನನ್ನ ಶಾಶ್ವತ ಹುದ್ದೆ. ಸಾಮಾನ್ಯ ಕಾರ್ಯಕರ್ತನಾಗಿ ಇರುವುದು ಹೆಚ್ಚು ಖುಷಿ ನೀಡಲಿದೆ ಎಂದು ಹೇಳಿದ್ದಾರೆ.

**ರಾಹುಲ್ ಗಾಂಧಿಗೆ ತೊಂದರೆ ಕೊಡಲ್ಲ:** ತಮ ದೆಹಲಿಯ ಪ್ರವಾಸ ಕೇಂದ್ರ ಸಚಿವರನ್ನು ಭೇಟಿ ಮಾಡುವುದಕ್ಕೆ ಮತ್ತು ರಾಜ್ಯದ ಅಭಿವೃದ್ಧಿ ಯೋಜನೆಗಳ ಬಗ್ಗೆ ಚರ್ಚೆ ಮಾಡುವುದಕ್ಕೆ ಮಾತ್ರ ಸೀಮಿತವಾಗಿದೆ. ಇಲ್ಲಿ ಪಕ್ಷದ ಬೇರೆ ಯಾವ ನಾಯಕರನ್ನು ಭೇಟಿ ಮಾಡುತ್ತಿಲ್ಲ. ಮಲ್ಲಿಕಾರ್ಜುನ ಖರ್ಗೆ ಅವರು ದೆಹಲಿಯಲ್ಲೇ ಇದ್ದಾರೆ. ರಾಹುಲ್ ಗಾಂಧಿಯವರು ನಿನ್ನೆಯಷ್ಟೆ ವಿದೇಶಿ ಪ್ರವಾಸದಿಂದ ಬಂದಿದ್ದಾರೆ. ಅವರಿಗೆ ತೊಂದರೆ ನೀಡಲು ಬಯಸುವುದಿಲ್ಲ. ಉಳಿದಂತೆ ಯಾವ ನಾಯಕರು ದೆಹಲಿಯಲ್ಲಿ ಲಭ್ಯ ಇಲ್ಲ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ನಮಲ್ಲಿ ಯಾವುದೇ ಗೊಂದಲಗಳಿಲ್ಲ. ಅನಗತ್ಯವಾಗಿ ಮಾಧ್ಯಮಗಳಲ್ಲಿ ಚರ್ಚೆಯಾಗುತ್ತಿದೆ. ಮುಖ್ಯಮಂತ್ರಿ ಅವರೊಂದಿಗೆ ಉಪಹಾರಕೂಟ ನಡೆಸಿರುವುದು ಒಂದು ಸಹಜವಾದ ಬೆಳವಣಿಗೆ. ಸಾರ್ವಜನಿಕ ಜೀವನದಲ್ಲಿರುವ ತಾವು ದಿನನಿತ್ಯವೂ ಕೈಗಾರಿಕೋದ್ಯಮಿಗಳು, ಜನಸಾಮಾನ್ಯರು, ಅಧಿಕಾರಿಗಳ ಜೊತೆ ಚರ್ಚೆ ಮಾಡುತ್ತಲೇ ಇರುತ್ತೆ?ನೆ. ಅದನ್ನೆಲ್ಲ ಪ್ರತ್ಯೇಕವಾಗಿ ನೋಡುವ ಅಗತ್ಯವಿಲ್ಲ ಎಂದರು.

ಒಪ್ಪಂದದ ಬಗ್ಗೆ ಚಕಾರವಿಲ್ಲ: ಅಧಿಕಾರ ಹಂಚಿಕೆಯ ಬಗ್ಗೆ ಒಪ್ಪಂದವಾಗಿದೆ ಎಂಬ ತಮ ಹೇಳಿಕೆಯ ಬಗ್ಗೆ ಮತ್ತೊಂದು ಬಾರಿ ಸ್ಪಷ್ಟನೆ ನೀಡಲು ಬಯಸುವುದಿಲ್ಲ ಎಂದು ಅವರು ಹೇಳಿದರು. ಎರಡೂವರೆ ವರ್ಷದ ಅಧಿಕಾರ ಹಂಚಿಕೆಯ ಬಗ್ಗೆ ಏನೆಲ್ಲ ಚರ್ಚೆಯಾಗಿದೆ ಎಂಬುದನ್ನು ಬಹಿರಂಗಪಡಿಸಲು ತಾವು ಬಯಸುವುದಿಲ್ಲ. ನಮ ಮುಂದೆ ಈಗಿರುವ ಆದ್ಯತೆ ರಾಜ್ಯದ ಜನರಿಗೆ ನೀಡಿರುವ ಭರವಸೆಗಳನ್ನು ಈಡೇರಿಸುವುದು. ಕಾರ್ಯಕರ್ತರು ಬೆವರು ಹರಿಸಿ, ತಮ ಜೀವನವನ್ನು ತ್ಯಾಗ ಮಾಡಿ ಪಕ್ಷ ಕಟ್ಟಿದ್ದಾರೆ. ಜನರ ಆಶೀರ್ವಾದದಿಂದ ಭರ್ಜರಿ ಬಹುಮತ ಬಂದಿದೆ. ಈ ಸಂದರ್ಭದಲ್ಲಿ ನಾವು ಜನರಿಗೆ ನೀಡಿದ ವಾಗ್ದಾನಗಳ ಮೇಲೆ ಗಮನ ಕೇಂದ್ರಿಕರಿಸಿದ್ದೇವೆ ಎಂದರು.

ಮೈಸೂರಿನಲ್ಲಿ ಅಹಿಂದ ಸಮಾವೇಶ ನಡೆಸಲು ಮುಂದಾಗಿರುವವರಿಗೆ ಶುಭವಾಗಲಿ ಎಂದು ಇದೇ ಸಂದರ್ಭದಲ್ಲಿ ಡಿ.ಕೆ.ಶಿವಕುಮಾರ್ ಹಾರೈಸಿದರು.ಕೆ.ಎನ್.ರಾಜಣ್ಣರನ್ನು ಅಫೆಕ್ ಬ್ಯಾಂಕ್ ಅಧ್ಯಕ್ಷರನ್ನಾಗಿ ಮಾಡಿದ್ದಾಗಿ ಈ ಮೊದಲು ಹೇಳಿದ್ದ



ಡಿಕೆಶಿ ಹೇಳಿಕೆಗೆ, ಎಸ್.ಎಂ.ಕೃಷ್ಣ ಅವರ ಸರ್ಕಾರದಲ್ಲಿ ತಮಗೆ ಅಧ್ಯಕ್ಷರಾಗುವ ಅವಕಾಶ ಸಿಕ್ಕಿತ್ತು. ಆಗ ಡಿ.ಕೆ.ಶಿವಕುಮಾರ್ ಸಹಕಾರ ಸಚಿವರಾಗಿದ್ದರು ಎಂದು ಹೇಳಿದ್ದರು. ಈ ಹೇಳಿಕೆಗೆ ಇಂದು ಪ್ರತಿಕ್ರಿಯಿಸಿದ ಡಿ.ಕೆ.ಶಿವಕುಮಾರ್, ಎಸ್‌ಎಂ ಕೃಷ್ಣ ಅವರು ಈಗ ಇಲ್ಲ. ನಾವು ಅವರು ಇರುವ ದೇವರ ಬಳಿ ಹೋಗಿ ಸತ್ಯ ಏನೆಂದು ಕೇಳಿಕೊಂಡು ಬರಬೇಕಷ್ಟೆ ಎಂದು ಹೇಳಿದರು.

ಬೂತ್ ಮಟ್ಟದ ಕಾರ್ಯಕರ್ತರನ್ನು ಸರಿಯಾಗಿ ನೇಮಿಸದೇ ಇದ್ದಿದ್ದಕ್ಕೆ ಮತಗಳ್ಳತನ ನಡೆದಿದೆ ಎಂದು ರಾಜಣ್ಣ, ರಾಹುಲ್ ಗಾಂಧಿಯವರಿಗೆ ಪತ್ರ ಬರೆದಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಡಿ.ಕೆ.ಶಿವಕುಮಾರ್, ನನಗೆ ಅನುಭವ ಕಡಿಮೆ. ತರಬೇತಿ ಪಡೆದುಕೊಂಡು ಬರುತ್ತೇನೆ ಎಂದು ತಿಳಿಸಿದರು.

ರಾಹುಲ್ ಗಾಂಧಿಗೆ ಬೆಂಬಲ: ಎಐಸಿಸಿ ಪ್ರಧಾನ ಕಾರ್ಯದರ್ಶಿಯಾಗಿರುವ ಸಂಸದೆ ಪ್ರಿಯಾಂಕಾ ಗಾಂಧಿ ಅವರನ್ನು ಪ್ರಧಾನಿ ಮಾಡಬೇಕು ಎಂಬ ಚರ್ಚೆಗೆ ಅಸಮಾಧಾನ ವ್ಯಕ್ತಪಡಿಸಿ, ಇಂತಹ ಗೊಂದಲಗಳು ಅನಗತ್ಯವಾಗಿ ಚರ್ಚೆಯಾಗುವುದು ಬೇಡ. ಪಕ್ಷದಲ್ಲಿ ಶಿಸ್ತು ಬಹಳ ಮುಖ್ಯ. ಎಲ್ಲರೂ ಶಿಸ್ತಿನ ಚೌಕಟ್ಟಿನಲ್ಲಿರಬೇಕು ಎಂದು ಡಿ.ಕೆ.ಶಿವಕುಮಾರ್ ಮನವಿ ಮಾಡಿಕೊಂಡರು.

ರಾಷ್ಟ್ರಮಟ್ಟದಲ್ಲಿ ಪ್ರಿಯಾಂಕಾ ಗಾಂಧಿ ಅವರ ವರ್ಚಸ್ಸಿಗೆ ಹೆಚ್ಚಿನ ಜನ ಮನ್ನಣೆ ಇದೆ ಅದಕ್ಕಾಗಿ ಇದೇ ತಿಂಗಳ 27ರಂದು ನಡೆಯಲಿರುವ ಕಾಂಗ್ರೆಸ್ಸಿನ ರಾಷ್ಟ್ರಿಯ ಕಾರ್ಯಕಾರಣಿ ಸಮಿತಿ ಸಭೆಯಲ್ಲಿ ಪ್ರಿಯಾಂಕ ಗಾಂಧಿ ಅವರ ನಾಯಕತ್ವಕ್ಕೆ ಆದ್ಯತೆ ನೀಡಬೇಕು ಎಂಬ ಬೇಡಿಕೆ ಕೇಳಿ ಬಂದಿದೆ. ಕಾಂಗ್ರೆಸ್ ಪಕ್ಷದಲ್ಲಿ ಇದು ವ್ಯಾಪಕ ಚರ್ಚೆಗೆ ಒಳಗಾಗುತ್ತಿದೆ. ರಾಷ್ಟ್ರಮದಲ್ಲಿ ಕಾಂಗ್ರೆಸ್ ಒಳಗೆ ಮತ್ತೆ ಭಿನ್ನ ರಾಗಗಳು ಕೇಳಿ ಬರುತ್ತಿವೆ.

ದೆಹಲಿಯ ಪ್ರವಾಸದಲ್ಲಿರುವ ಡಿ.ಕೆ.ಶಿವಕುಮಾರ್ ಅವರಿಗೆ ಈ ಪ್ರಶ್ನೆ ಎದುರಾದಾಗ ಉತ್ತರಿಸಲು ಮುಜುಗರ ಅನುಭವಿಸಿದ ಶಿವಕುಮಾರ್, ರಾಹುಲ್ ಗಾಂಧಿಯವರು ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಪಾದಯಾತ್ರೆ ನಡೆಸಿದ್ದಾರೆ. ರಾಹುಲ್ ಗಾಂಧಿ ಲೋಕಸಭೆಯ ವಿರೋಧ ಪಕ್ಷದ ನಾಯಕರಾಗಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಸೋನಿಯಾ ಗಾಂಧಿಯವರ ಮಾರ್ಗದರ್ಶನದಲ್ಲಿ ಉತ್ತಮ ಕೆಲಸಗಳನ್ನು ಮಾಡುತ್ತಿದ್ದಾರೆ.

ಪ್ರಿಯಾಂಕಾ ಗಾಂಧಿಯವರಿಗೂ ರಾಹುಲ್ ಗಾಂಧಿಯವರನ್ನು ಪ್ರಧಾನಿಯನ್ನಾಗಿ ನೋಡಬೇಕೆಂಬ ಅಭಿಲಾಷೆ ಇದೆ. ಇಂತಹ ಸಂದರ್ಭದಲ್ಲಿ ಯಾರು ಕೂಡ ಗೊಂದಲಕಾರಿ ಹೇಳಿಕೆಗಳನ್ನು ನೀಡಬಾರದು ಎಂದರು. ಪಕ್ಷದ ರಾಷ್ಟ್ರಿಯ ಕಾರ್ಯಸಮಿತಿ ಸಭೆಯಲ್ಲಿ ಯಾವುದೇ ನಿರ್ಣಯ ಕೈಗೊಂಡರೂ ನಾವು ಅದಕ್ಕೆ ಬದ್ಧರಾಗಿರುತ್ತೇವೆ. ಸದ್ಯಕ್ಕಂತೂ ರಾಷ್ಟ್ರಮಟ್ಟದಲ್ಲಿ ನಾಯಕತ್ವದ ಬದಲಾವಣೆಯ ಚರ್ಚೆ ಇಲ್ಲ ಎಂದು ಅವರು ಹೇಳಿದರು.

# ಭಾರತಕ್ಕೆ ಯಾವಾಗ ವಾಪಸ್ಸಾಗುತ್ತೀರಿ..? : ವಿಜಯ್ ಮಲ್ಯಗೆ ಬಾಂಬೆ ಹೈಕೋರ್ಟ್ ಪ್ರಶ್ನೆ

**ಮುಂಬೈ, ಡಿ.24–** ಭಾರತಕ್ಕೆ ಯಾವಾಗ ಮರಳಲು ಉದ್ದೇಶಿಸಿದ್ದೀರಿ ಎಂದು ಬಾಂಬೆ ಹೈಕೋರ್ಟ್ ಮದ್ಯದ ದೊರೆ ವಿಜಯ್ ಮಲ್ಯ ಅವರನ್ನು ಕೇಳಿದೆ.ದೇಶದಿಂದ ಪರಾರಿಯಾಗಿರುವ ಉದ್ಯಮಿ ವಿಜಯ್ ಮಲ್ಯ ಅವರು ಯಾವಾದ ದೇಶಕ್ಕೆ ಹಿಂತಿರುಗುವುದಾಗಿ ತಿಳಿಸದ ಹೊರತು ಪರಾರಿಯಾಗಿರುವ ಆರ್ಥಿಕ ಅಪರಾದಿಗಳ ಕಾಯ್ದೆಯ ವಿರುದ್ಧದ ಅವರ ಅರ್ಜಿಯನ್ನು ಆಲಿಸುವುದಿಲ್ಲ ಎಂದು ಅವರ ವಕೀಲರಿಗೆ ಕೋರ್ಟ್ ಸೂಚಿಸಿದೆ.

2016 ರಿಂದ ಯುಕೆಯಲ್ಲಿ ನೆಲೆಸಿರುವ ಮಲ್ಯ, ಹೈಕೋರ್ಟ್‌ನಲ್ಲಿ ಎರಡು ಅರ್ಜಿಗಳನ್ನು ಸಲ್ಲಿಸಿದ್ದಾರೆ ಒಂದು ತಮ್ಮನ್ನು ಪರಾರಿಯಾಗಿರುವ ಆರ್ಥಿಕ ಅಪರಾಧಿ ಎಂದು ಘೋಷಿಸಿದ ಆದೇಶವನ್ನು ಪ್ರಶ್ನಿಸಿ ಮತ್ತು ಇನ್ನೊಂದು 2018 ರ ಕಾಯ್ದೆಯ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿದ್ದಾರೆ.

ವಂಚನೆ ಮತ್ತು ಹಣ ವರ್ಗಾವಣೆ ಆರೋಪದ ಮೇಲೆ ವಿಚಾರಣೆ ಎದುರಿಸಲು ಭಾರತದಲ್ಲಿ ಬೇಕಾಗಿದ್ದ 70 ವರ್ಷದ ಮದ್ಯದ ದೊರೆ ಅವರ ಅವಳಿ ಅರ್ಜಿಗಳನ್ನು ಆಲಿಸುವಾಗ ಅವರು ಮನೆಗೆ ಹಿಂದಿರುಗಿದಾಗ, ಹೈಕೋರ್ಟ್ ಈ ಪ್ರಶ್ನೆಯನ್ನು ಕೇಳಿತು.

ಮುಖ್ಯ ನ್ಯಾಯಮೂರ್ತಿ ಚಂದ್ರಶೇಖರ್ ಮತ್ತು ನ್ಯಾಯಮೂರ್ತಿ ಗೌತಮ್ ಅಂಕದ್ ಅವರ ಪೀಠವು, ವಿವಾದಿತ ಉದ್ಯಮಿ ವಕೀಲ ಅಮಿತ್ ದೇಸಾಯಿ ಅವರಿಗೆ, ಮಲ್ಯ ಮೊದಲು ನ್ಯಾಯಾಲಯದ ವ್ಯಾಪ್ತಿಗೆ ಸಲ್ಲಿಸದ ಹೊರತು, ಕಾಯ್ದೆಯ ವಿರುದ್ಧದ ಅರ್ಜಿಯನ್ನು ಆಲಿಸುವುದಿಲ್ಲ ಎಂದು ಸ್ಪಷ್ಟಪಡಿಸಿತು.

ಜಾರಿ ನಿರ್ದೇಶನಾಲಯ (ಇಡಿ) ಪರವಾಗಿ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ದೇಶದ ನ್ಯಾಯಾಲಯಗಳಿಗೆ ಒಳಪಡದೆ, ಯಾವುದೇ ಕಾಯ್ದೆಯ ಸಿಂಧುತ್ವವನ್ನು ಪ್ರಶ್ನಿಸಲು ಪರಾರಿಯಾದವರಿಗೆ ಅವಕಾಶ ನೀಡಬಾರದು ಎಂದು ವಾದಿಸಲಾದ ಅರ್ಜಿಗಳನ್ನು ವಿರೋಧಿಸಿದರು.ದೇಶದಿಂದ ದೂರ ಉಳಿದು ತಮ್ಮ ವಕೀಲರ ಮೂಲಕ ಅರ್ಜಿಗಳನ್ನು ಸಲ್ಲಿಸುವ ಮೂಲಕ ಅಂತಹ ವ್ಯಕ್ತಿಗಳು ಕಾನೂನನ್ನು ದುರುಪಯೋಗಪಡಿಸಿಕೊಳ್ಳದಂತೆ ನೋಡಿಕೊಳ್ಳಲು ಇಬ ಕಾಯ್ದೆಯನ್ನು ತರಲಾಗಿದೆ ಎಂದು ಅವರು ನ್ಯಾಯಾಲಯಕ್ಕೆ ತಿಳಿಸಿದರು.



ಮಲ್ಯ ವಿರುದ್ಧ ಪ್ರಾರಂಭಿಸಲಾದ ಹಸ್ತಾಂತರ ಪ್ರಕ್ರಿಯೆಗಳು ಮುಂದುವರಿದ ಹಂತದಲ್ಲಿವೆ ಎಂದು ಮೆಹ್ತಾ ನ್ಯಾಯಾಲಯಕ್ಕೆ ತಿಳಿಸಿದರು.ಮಲ್ಯ ಸಲ್ಲಿಸಿದ ಎರಡೂ ಅರ್ಜಿಗಳನ್ನು ಒಟ್ಟಿಗೆ ನಡೆಸಲು ಅವಕಾಶ ನೀಡಲು ಸಾಧ್ಯವಿಲ್ಲ ಎಂದು ಪೀಠವು ಒತ್ತಾಯಿಸಿತು ಮತ್ತು ಈಗ ನಿಷ್ಕ್ರಿಯವಾಗಿರುವ ಕಿಂಗ್‌ಫಿಷರ್ ಏರ್‌ಲೈನ್ಸ್ ನ ಪ್ರವರ್ತಕರಿಗೆ ಅವರು ಯಾವ ಅರ್ಜಿಯನ್ನು ಒತ್ತಾಯಿಸಲು ಬಯಸುತ್ತಾರೆ ಮತ್ತು ಯಾವುದನ್ನು ಹಿಂತೆಗೆದುಕೊಳ್ಳಬೇಕು ಎಂಬುದನ್ನು ಸ್ಪಷ್ಟಪಡಿಸುವಂತೆ ಕೇಳಿತು.

ಮಲ್ಯ ಅವರ 14,000 ಕೋಟಿ ರೂ. ಮೌಲ್ಯದ ಆಸ್ತಿಗಳನ್ನು ಲಗತ್ತಿಸುವುದರೊಂದಿಗೆ ಮತ್ತು ಸಾಲ ನೀಡುವ ಬ್ಯಾಂಕುಗಳು 6,000 ಕೋಟಿ ರೂ. ಮೌಲ್ಯದ ಹೊಣೆಗಾರಿಕೆಗಳನ್ನು ವಸೂಲಿ ಮಾಡುವ ಮೂಲಕ ಹಣಕಾಸಿನ ಹೊಣೆಗಾರಿಕೆಯನ್ನು ಪರಿಣಾಮಕಾರಿಯಾಗಿ ತಟಸ್ಥಗೊಳಿಸಲಾಗಿದೆ ಎಂದು ದೇಸಾಯಿ ನ್ಯಾಯಾಲಯಕ್ಕೆ ತಿಳಿಸಿದರು.ವಿದೇಶದಲ್ಲಿ ನೆಲೆಸಿರುವಾಗಲೂ ಪರಾರಿಯಾದ ಉದ್ಯಮಿ ಕಾನೂನು ಪ್ರಾತಿನಿಧ್ಯಕ್ಕೆ ಅರ್ಹರಾಗಿದ್ದಾರೆ ಎಂದು ಸಾಲಿಸಿಟರ್ ಜನರಲ್ ವಾದಿಸಿದರು.

ಆದಾಗ್ಯೂ, ನ್ಯಾಯಾಲಯದ ವ್ಯಾಪ್ತಿಗೆ ಒಳಪಡದೆ ಕ್ರಿಮಿನಲ್ ಹೊಣೆಗಾರಿಕೆಯನ್ನು ಹೇಗೆ ಅಳಿಸಿಹಾಕಬಹುದು ಎಂದು ಪೀಠ ಪ್ರಶ್ನಿಸಿತು.ಮಲ್ಯ ಅವರು ಯಾವ ಅರ್ಜಿಯನ್ನು ಮುಂದುವರಿಸಲು ಬಯಸುತ್ತಾರೆ ಎಂಬುದನ್ನು ನ್ಯಾಯಾಲಯಕ್ಕೆ ತಿಳಿಸಲು ಹೈಕೋರ್ಟ್ ಪ್ರೇಬ್ರವರಿ 12 ರಂದು ಈ ವಿಷಯವನ್ನು ಮುಂದಿನ ವಿಚಾರಣೆಗೆ ನಿಗದಿಪಡಿಸಿತು.

### ಜಿಲ್ಲಾ ಮಟ್ಟದ ಪತ್ರಕರ್ತರ ಸಂಘದ ಪದಗ್ರಹಣ ಸಮಾರಂಭ ಇಂದು; ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ರಾಜ್ಯ ಪ್ರಧಾನ ಕಾರ್ಯದರ್ಶಿ ಲೋಕೇಶ ಭಾಗಿ

ರಾಯಚೂರು ಡಿಸೆಂಬರ್ 24 (ಕರ್ನಾಟಕ ವಾರ್ತೆ): ಕರ್ನಾಟಕ ಕಾರ್ಯನಿರತ ಪರ್ತ್ರಕರ್ತರ ಸಂಘದ 2025–2028ನೇ ಸಾಲಿನ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವು ನಗರದ ಕನ್ನಡ ಭವನದಲ್ಲಿ ಡಿಸೆಂಬರ್ 25ರ ಸಂಜೆ 4 ಗಂಟೆಗೆ ಆಯೋಜಿಸಲಾಗಿದೆ.

ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಕಾರ್ಯಕ್ರಮ ಉದ್ಘಾಟಿಸುವರು. ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ ಅವರು ಜಿಲ್ಲಾ ಮತ್ತು ತಾಲೂಕು ಘಟಕಗಳ ನೂತನ ಪದಾಧಿಕಾರಿಗಳಿಗೆ ಪ್ರಮಾಣ ವಚನ ಬೋಧನೆ ಮಾಡುವರು.

ರಾಜ್ಯ ಸಮಿತಿ ಸದಸ್ಯ ಬಸವರಾಜ ನಾಗಡದಿನ್ನಿ, ನಿಕಟಪೂರ್ವ ರಾಜ್ಯ ಸಮಿತಿ ಸದಸ್ಯ ಶಿವಮೂರ್ತಿ ಹಿರೇಮಠ, ನಿಕಟಪೂರ್ವ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಪಾಷಾ ಹಟ್ಟಿ ಸೇರಿದಂತೆ ಇತರರು ಪಾಲ್ಗೊಳ್ಳುವರು.

ಕರ್ನಾಟಕ ಕಾರ್ಯನಿರತ ಪರ್ತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್.ಗುರುನಾಥ ಅವರು ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದ ಬಳಿಕ ರಾಜ್ಯಾಧ್ಯಕ್ಷರ ಅಧ್ಯಕ್ಷತೆಯಲ್ಲಿ ರಾಯಚೂರಿನಲ್ಲಿ ಜರುಗಲಿರುವ ಪತ್ರಕರ್ತರ ರಾಜ್ಯ ಸಮ್ಮೇಳನದ ಕುರಿತು ಪೂರ್ವಭಾವಿ ಸಭೆ ಜರುಗಲಿದೆ. ಸಂಘದ ಎಲ್ಲ ಸದಸ್ಯರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸಂಘದ ಜಿಲ್ಲಾಧ್ಯಕ್ಷ ಆರ್.ಗುರುನಾಥ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ಧಯ್ಯಸ್ವಾಮಿ ಕುಕನೂರು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆದ ಹಲುಗಂಬ ಉತ್ಸವ



ಯುವಮಾರ್ಗ ಸುದ್ದಿ

**ಅರಕೇರಾ,ಡಿ.24–**ತಾಲೂಕಿನ ಬಿ.ಗಣೇಕಲ್ ಗ್ರಾಮದ ಶ್ರೀ ಮಾರುತೇಶ್ವರ ದೇವರ ಹಾಲುಗಂಬ ಉತ್ಸವ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಬುಧವಾರ ಸಂಜೆ ಅದ್ದೂರಿಯಾಗಿ ನಡೆಯಿತು.

ಶ್ರೀ ಮಾರುತೇಶ್ವರ ದೇವರ ಜಾತ್ರಾ ಮಹೋತ್ಸವ ಎಳ್ಳ ಅಮವಾಸ್ಯೆಯ ಆರನೇ ದಿನ ನಡೆಯುವ ಹಾಲುಗಂಬ ಹತ್ತುವ ಸ್ಪರ್ಧೆಯಲ್ಲಿ ಚಿಕ್ಕ ಮಕ್ಕಳು, ಯುವಕರು ಉತ್ಸಾಹದಿಂದ ಪಾಲ್ಗೊಂಡಿದ್ದರು.

ಸತತ ಮೂರು ಗಂಟೆಗೂ ಅಧಿಕ ಸಮಯ ಹಾಲುಗಂಬ ಉತ್ಸವ ಸ್ಪರ್ಧೆ ನಡೆಯಿತು. ಒಬ್ಬರ ಮೇಲೆ ಒಬ್ಬರು ಹಾಲುಗಂಬ ಹತ್ತುತ್ತಾ ಕೆಳಗೆ ಜಾರಿ ಬೀಳುವ ದೃಶ್ಯಗಳನ್ನು ಕಂಡು ನೆರೆದಿದ್ದ ಯುವಕರು ಶಿಳ್ಳೆ, ಚಪ್ಪಾಳೆಗಳ ಮೂಲಕ ಸ್ಪರ್ಧಾಳುಗಳನ್ನು ಹುರಿದುಂಬಿಸುತ್ತಿದ್ದರು.

ಹಲುಂಗಬಕ್ಕೆ ಎರಚುತ್ತಿದ್ದ ನೀರಿನ ರಸಭಸಕ್ಕೆ ಕಂಬ ಹತ್ತಲು ಹರಸಾಹಸ ಪಡುವಂತಾಯಿತು. ನೂತನವಾಗಿ ತಯಾರಿಸಿದ ಹಾಲುಗಂಬವನ್ನು ಎಳ್ಳು ಅಮಾವಾಸ್ಯೆಯ ಮರುದಿನ ಶ್ರೀ ಮಾರುತೇಶ್ವರ ದೇವಸ್ಥಾನದವರೆಗೆ ಮೆರವಣಿಗೆ ಮೂಲಕ ಸ್ಥಾಪಿಸಲಾಯಿತು. ಬುಧವಾರ ಬೆಳಿಗ್ಗೆಯಿಂದ ದೇವಸ್ಥಾನದಲ್ಲಿ ಶ್ರೀ ಮಾರುತೇಶ್ವರ ಮೂರ್ತಿಗೆ ಎಲೆ ಪೂಜೆ ಜೊತೆಗೆ ವಿಶೇಷ ಪೂಜೆಗಳು ನಡೆದವು. ಸುತ್ತಲಿನ ತಾಂಡಾಗಳಿಂದ, ವಿವಿಧ ಗ್ರಾಮಗಳ ಗ್ರಾಮಸ್ಥರು ಉತ್ಸವದಲ್ಲಿ ಪಾಲ್ಗೊಂಡು ಉತ್ಸವಕ್ಕೆ ಮೆರುಗು ನೀಡಿದರು.

ಹಾಲುಗಂಬಕ್ಕೆ ಲೋಳೆ ರಸ, ಜಾಜು ಲೇಪನ ಮಾಡಲಾಗಿತ್ತು. ಕಂಬದ ಮೇಲೆ ಕುಳಿತ ಪೂಜಾರಿ ಮೇಲಿಂದ ಹಾಲು, ಮಜ್ಜಿಗೆ, ನೀರು ಬಿಟ್ಟರು. ಸ್ಪರ್ಧಾಳುಗಳು ನಾ ಮುಂದು, ತಾ ಮುಂದು ಎಂದು ಪೈಪೋಟಿ ತೋರಿದರು. ಸಿಳ್ಳೆ, ಕೆಕೆ, ಚಪ್ಪಾಳೆ ಮೊಳಗಿದ್ದವು. ಸ್ಪರ್ಧಾಳುಗಳು ಕಂಬ ಹತ್ತುವಾಗ ಜಾರಿ ಬೀಳುವ ದೃಶ್ಯ ಸಾಮಾನ್ಯವಾಗಿತ್ತು. ಕೊನೆವರೆಗೂ ಬಸವರಾಜ ಪಿಲಿಗುಂಡ ಎನ್ನವವರು ಪೈಪೋಟಿ ಪ್ರದರ್ಶನ ಮಾಡಿದರು. ಸಂಜೆ 6.35 ಗಂಟೆಯಾದರೂ ಯಾವ ಸ್ಪರ್ಧಾಳುಗಳು ಹಾಲುಗಂಬದ ತುದಿ ತಲುಪಿ ಪ್ರಥಮರಾಗದ ಹಿನ್ನಲೆ ಕಂಬದ ಮೇಲೆ ಕುಳಿತ ಪೂಜಾರಿಯೇ ಕಂಬವನ್ನು ಹರಿದು ಸ್ಪರ್ಧೆಗೆ ಅಂತ್ಯ ಹಾಡಿದರು.

# ಓಸಿ ಬಗ್ಗೆ ಪೊಲೀಸರ ನಿರ್ಲಕ್ಷ ಎಸ್ಪಿ ಎದುರಿನಲ್ಲೇ ಜನರಿಂದ ತರಾಟೆಗೆ




**ಬಳ್ಳಾರಿ, ಡಿ.24–**ನಗರದಲ್ಲಿ ಮುಕ್ತವಾಗಿ ನಡೆಯುತ್ತಿರುವ ಮಟಕಾ (ಓಸಿ) ದಂಧೆ ಬಗ್ಗೆ ಎಸ್ಪಿ ಡಾ.ಶೋಭಾರಾಣಿ ಅವರ ಎದುರಿನಲ್ಲಿಯೇ ಸಾರ್ವಜನಿಕರು ಪೊಲೀಸರನ್ನು ತರಾಟೆಗೆ ತೆಗೆದುಕೊಂಡಿದ್ದು ಕಂಡು ಬಂದಿದೆ.

ನಿನ್ನೆ ನಗರದ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಸಾರ್ವಜನಿಕರ ಸಮಸ್ಯೆಗಳ ಪರಾಮರ್ಶೆ ಸಭೆಯಲ್ಲಿ ಭಾಗಿಯಾಗಿದ್ದ ಎಸ್ಪಿ ಅವರ ಮುಂದೆಯೇ ಮಟ್ಕಾ ದಂಧೆ ನಡೆಯುವುದನ್ನು ನೋಡಿಯೂ ಪೊಲೀಸರು ಸುಮ್ಮನಿದ್ದಾರೆ ಅದರಲ್ಲೂ ನಗರದ ಎಪಿಎಂಸಿ ಪೊಲೀಸ್ ಠಾಣೆಯ ಪೊಲೀಸರ ಕಾರ್ಯವೈಖರಿ ಸಾರ್ವಜನಿಕರಿಂದ ತೀವ್ರ ಟೀಕೆಗೆ ಗುರಿಯಾಯ್ತು.

ಸಾರ್ವಜನಿಕರ ಪ್ರಶ್ನೆಗೆ ಒಂದಿಷ್ಟು ಸಿಡುಕಿನಿಂದಲೇ ಎಸ್ಪಿ ಶೋಭಾರಾಣಿ ಅವರು ನಾನಿಲ್ಲಿ ಬಂದಿರುವುದು ಸಮಸ್ಯೆ ಆಲಿಸಲು. ಸಮಸ್ಯೆ ಹೇಳಿ ಅದು ಬಿಟ್ಟು ನನ್ನೆದುರಿಗೆ ನನ್ನ ಇಲಾಖೆ ಸಿಬ್ಬಂದಿಯನ್ನು ಪ್ರಶ್ನಿಸಬೇಡಿ ಎಂದು ತಮ್ಮ ಸಿಬ್ಬಂದಿ ಪರ ನಿಂತಿದ್ದಾರೆ.

# ಬಿ.ವಿ.ಆರ್ ಇ–ಟೆಕ್ನೋ ಶಾಲೆ ಆವರಣದಲ್ಲಿ ಕ್ರಿಸ್ ಮಸ್ ಆಚರಣೆ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.24–** ಪಟ್ಟಣದ ಬಿ.ವಿ.ಆರ್ ಇ–ಟೆಕ್ನೋ ಶಾಲೆ ಆವರಣದಲ್ಲಿ ಕ್ರಿಸ್ ಮಸ್ ಹಬ್ಬದ ಅಂಗವಾಗಿ ಶಾಲೆಯ ವಿದ್ಯಾರ್ಥಿಗಳಿಗೆ ಕ್ರಿಸ್ ಮಸ್ ಹಬ್ಬದ ಕುರಿತು ಶಾಲೆಯ ಮಕ್ಕಳು ನೃತ್ಯ ರೂಪಕದ ಮೂಲಕ ತಿಳಿಸಿಕೊಟ್ಟರು ಹಾಗೂ ಯೇಸು ಕ್ರೀಸ್ತನ ಜನ್ಮ ವೃತ್ತಂತವನ್ನು ತಿಳಿಸುವ ರೂಪಕಗಳನ್ನು ಮಕ್ಕಳು ಅಭಿನಯಿಸಿದರು. ಛದ್ಮವೇಶವನ್ನು ಧರಿಸಿ ಕೊಂಡು ಸಂಭ್ರಮದಿಂದ ಹಬ್ಬವನ್ನು ಆಚರಿಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಬಿ.ವಿ.ರೆಡ್ಡಿ, ಕಾರ್ಯದರ್ಶಿ ಬಿ.ಪದ್ಮಾವತಿ, ಮುಖ್ಯಗುರು ಸರ್ ಮತ್ ಖಾನ್, ಶಿಕ್ಷಕರಾದ ಶ್ರೀಕಾಂತ್ ತಡಕಲ್, ದೈಹಿಕ ಶಿಕ್ಷಕರಾದ ಇಸಾಕ್ ,. ಅಲ್ಬರ್ಟ, .ಕು. ಸುನಿತಾ, ತ್ರಿವೇಣಿ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.


# ಡಿ.27 ರಂದು ಮಾನ್ವಿಯಲ್ಲಿ ಬಸವರಾಜಸ್ವಾಮಿ ಇವರ ಬಸವ ಗೀತೆ ಗ್ರಂಥ ಲೋಕಾರ್ಪಣೆ

ಯುವಮಾರ್ಗ ಸುದ್ದಿ

**ಮಾನ್ವಿ ಡಿ–24–** ಗ್ರಂಥ ಲೋಕಾರ್ಪಣೆ ಕಾರ್ಯಕ್ರಮವನ್ನು ಡಿ.27 ರಂದು ಶನಿವಾರ ಸಾಯಂಕಾಲ 5 ಗಂಟೆಗೆ ಮಾನ್ವಿ ಪಟ್ಟಣದ ಬಿ.ವಿ.ಆರ್ ಇ–ಟೆಕ್ನೋ ಸ್ಕೂಲ್ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಶ್ರೀ ಬಸವ ಸೇವಾ ಪ್ರತಿಷ್ಠಾನ ಹಾಗೂ ಸುದ್ದಿಮೂಲ ದಿನಪತ್ರಿಕೆ ರಾಯಚೂರು, ಬಸವ ಕೇಂದ್ರ ಮಾನ್ವಿ, ಶರಣ ಸಾಹಿತ್ಯ ಪರಿಷತ್ತು ಮಾನ್ವಿ, ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಮಾನ್ವಿ ಹಾಗೂ ತಾಲೂಕಾ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ ಮಾನ್ವಿ ಇವರ ಸಂಯುಕ್ತಾಶ್ರಯದಲ್ಲಿ ನಡೆಯುವ ಸಮಾರಂಭವನ್ನು ನಿವೃತ್ತ ಶಿಕ್ಷಣಾಧಿಕಾರಿ ಡಿ.ಜಿ.ಕರ್ಕಿಹಳ್ಳಿ ಉದ್ಘಾಟಿಸುವರು.ನಿವೃತ್ತ ಉಪನ್ಯಾಸಕ ಬಿ.ಜಿ.ಹುಲಿ ಗ್ರಂಥ ಲೋಕಾರ್ಪಣೆ ಮಾಡಿ ಪುಸ್ತಕ ಕುರಿತು ಮಾತನಾಡುವರು. ಬಸವ ಕೇಂದ್ರದ ಗೌರವಾಧ್ಯಕ್ಷರಾದ ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರು ಅಧ್ಯಕ್ಷತೆ ವಹಿಸುವರು.

ಸಮಾರಂಭದಲ್ಲಿ ಲೇಖಕ ಹಾಗೂ ಸುದ್ದಿಮೂಲ ಸಂಪಾದಕ ಬಸವರಾಜಸ್ವಾಮಿ ಹಾಗೂ ಮುಖ್ಯ ಅತಿಥಿಗಳಾಗಿ ಬಸವ ಕೇಂದ್ರದ ಅಧ್ಯಕ್ಷ ಜಿ.ಎಂ.ರಂಗಪ್ಪ ಮೇದಾ, ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಕೆ.ಈ.ನರಸಿಂಹ, ಕಸಾಪ ಅಧ್ಯಕ್ಷ ಶರಣಬಸವ ನೀರಮಾನ್ವಿ, ತಾಲೂಕಾ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ರಾಜಾ ಸುಭಾಶ್ಚಂದ್ರ ನಾಯಕ, ನಿಕಟಪೂರ್ವ ಅಧ್ಯಕ್ಷ ಹೆಚ್.ಶರ್ಪುದ್ದೀನ್ ಪೋತ್ನಾಳ್, ಕಸಾಪ ಮಾಜಿ ಅಧ್ಯಕ್ಷ ಮೂಕಪ್ಪ ಕಟ್ಟಿಮನಿ, ಬಿವಿಆರ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಬಿ.ವಿ.ರೆಡ್ಡಿ ಭಾಗವಹಿಸುವರು. ಕಾರಣ ಸಕಲರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸುದ್ದಿಮೂಲ ವರದಿಗಾರ ಪಿ.ಪರಮೇಶ ಪತ್ರಿಕಾ ಪ್ರಕಟಣೆ ಮೂಲಕ ಕೋರಿದ್ದಾರೆ.




# ರಾಠೋಡ್ ಟ್ರಸ್ಟ್ ವತಿಯಿಂದ ಉಚಿತ ಬಂಜಾರ ಕಸೂತಿ ಪರೀಕ್ಷೆ



**ವಾಡಿ ಜಂಕ್ಷನ್,ಡಿ.24–**ರಾಠೋಡ್ ಎಜುಕೇಶನಲ್ ಚಾರಿಟೇಬಲ್ ಕಲ್ಚರಲ್ ಆಂಡ್ ಹೆರಿಟೇಜ್ ಟ್ರಸ್ಟನ ಹೆರಿಟೇಜ್ ಬ್ರ್ಯಾಂಡ್ ಆದ "ದ ಬಂಜಾರಾಸ್" ಅಡಿಯಲ್ಲಿ, ಬಂಜಾರ ಕಸೂತಿ ಕಲೆಯ ಎರಡು ದಿನಗಳ ಫೌಂಡೇಶನ್ ಕೋರ್ಸ್ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲಾಯಿತು.

ಅಪ್ಪಟ ಬಂಜಾರ ಕಲೆಗಳನ್ನು ಸಂರಕ್ಷಿಸುವ ಮತ್ತು ಕುಶಲಕರ್ಮಿಗಳ ಜೀವನೋಪಾಯವನ್ನು ಉತ್ತೇಜಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಒಂದು ತಿಂಗಳ ತರಬೇತಿಯ ನಂತರ ನಡೆದ ಈ ಪರೀಕ್ಷೆಯಲ್ಲಿ ಒಟ್ಟು 14 ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ವಿಶೇಷವೆಂದರೆ, ಯಾವುದೇ ಸರ್ಕಾರಿ ಅನುದಾನ ಅಥವಾ ಪ್ರಾಯೋಜಕತ್ವವಿಲ್ಲದೆ, ಟ್ರಸ್ಟನ ಸ್ವಯಂ–ನಿರ್ವಹಣಾ ಮಾದರಿಯಲ್ಲಿ ಈ ಸಂಪೂರ್ಣ ತರಬೇತಿ ಮತ್ತು ಪರೀಕ್ಷೆಯನ್ನು ಉಚಿತವಾಗಿ ನೀಡಲಾಯಿತು.

ಪರೀಕ್ಷೆಯ ವಿವರಗಳು:ಪರೀಕ್ಷೆಯು ಎರಡು ದಿನಗಳ ಕಾಲ ನಡೆದಿದ್ದು, ಪ್ರಾಯೋಗಿಕ ಮತ್ತು ಮೌಖಿಕ ಎಂಬ ಎರಡು ಪತ್ರಿಕೆಗಳನ್ನು ಒಳಗೊಂಡಿತ್ತು. ಪ್ರತಿಯೊಂದು ಪತ್ರಿಕೆಯು 100 ಅಂಕಗಳನ್ನು ಹೊಂದಿತ್ತು.

**ಪ್ರಾಯೋಗಿಕ ಪರೀಕ್ಷೆ:** ವಿದ್ಯಾರ್ಥಿಗಳು ಕೀ ಚೈನ್ ತಯಾರಿಕೆ, ಬ್ಯಾಗ್ ಕತ್ತರಿಸುವುದು ಮತ್ತು ಹೊಲಿಯುವುದು, ಪೊಟ್ಲಿ ತಯಾರಿಕೆ, ಬಂಜಾರ ಆಭರಣಗಳ ವಿನ್ಯಾಸ ಹಾಗೂ ಕನಿಷ್ಠ 10 ಬಗೆಯ ಸಾಂಪ್ರದಾಯಿಕ ಬಂಜಾರ ಕಸೂತಿ ಹೊಲಿಗೆಗಳನ್ನು ಪ್ರದರ್ಶಿಸಿದರು.

ಮೌಖಿಕ ಪರೀಕ್ಷೆ: ಸಾಂಸ್ಕೃತಿಕ ಸಂಕೇತಗಳು, ಹೊಲಿಗೆಯ ಗುರುತಿಸುವಿಕೆ, ವಸ್ತುಗಳ ಬಳಕೆ, ಬಣ್ಣಗಳ ಸಮನ್ವಯ ಮತ್ತು ಬಂಜಾರ ಕಲೆಯ ಪರಂಪರೆಯ ಮೌಲ್ಯದ ಕುರಿತು ಅಭ್ಯರ್ಥಿಗಳ ಜ್ಞಾನವನ್ನು ಮೌಲೀಕರಿಸಲಾಯಿತು.

ಪರೀಕ್ಷಕರು: ಪರೀಕ್ಷೆಯನ್ನು ಅತ್ಯಂತ ಪಾರದರ್ಶಕವಾಗಿ ನಡೆಸಲಾಯಿತು. ಆಂತರಿಕ ಪರೀಕ್ಷಕರಾಗಿ ಶ್ರೀಮತಿ ಧನಲಕ್ಷ್ಮಿ ರಾಠೋಡ್ ಮತ್ತು ಟ್ರಸ್ಟನ ಸಂಸ್ಥಾಪಕ ಅಧ್ಯಕ್ಷರಾದ ಡಾ. ನರೇಶ್ ರಾಠೋಡ್ ಕಾರ್ಯನಿರ್ವಹಿಸಿದರು. ಹೊರಗಿನ ಪರೀಕ್ಷಕರಾಗಿ ಎಂ.ಎಂ.ಕೆ ಲಲಿತಕಲೆ ಕಾಲೇಜಿನ ಪ್ರಾಚಾರ್ಯರಾದ ಶ್ರೀ ಶೇಷಗಿರಿ ರಾವ್ ಮತ್ತು ಹಿರಿಯ ಕಲಾವಿದರಾದ ಶ್ರೀ ವೀರೇಂದ್ರ ಶಾ ಅವರು ಆಗಮಿಸಿದ್ದರು.

"ನಮ್ಮ ಟ್ರಸ್ಟ್ ಸ್ವಾವಲಂಬಿ ಮಾದರಿಯನ್ನು ಅನುಸರಿಸುತ್ತಿದೆ. ಮೇಳಗಳು ಮತ್ತು ಪ್ರವಾಸಿ ತಾಣಗಳಲ್ಲಿ ನಮ್ಮ ಕೈಮಗ್ಗದ ಉತ್ಪನ್ನಗಳನ್ನು ಮಾರಾಟ ಮಾಡುವ ಮೂಲಕ ಕುಶಲಕರ್ಮಿಗಳಿಗೆ ಉದ್ಯೋಗ ಮತ್ತು ವೇತನವನ್ನು ನೀಡುತ್ತಿದ್ದೇವೆ. ಸರ್ಕಾರವು 'ಬಂಜಾರಾ ಏವಂ ಭಾರತೀಯ ಕಲಾಗ್ರಾಮ' ಎಂಬ ಪರಂಪರೆಯ ಕಲಾ ಗ್ರಾಮವನ್ನು ಸ್ಥಾಪಿಸಲು ಬೆಂಬಲ ನೀಡಬೇಕೆಂದು ವ್ಯವಸ್ಥಾಪಕ ಟ್ರಸ್ಟಿ ಡಾ.ನರೇಶ ರಾಠೋಡ್ ಮನವಿ ಮಾಡಿದ್ದಾರೆ.

### ಜಿಲ್ಲಾ ಮಟ್ಟದ ಪತ್ರಕರ್ತರ ಸಂಘದ ಪದಗ್ರಹಣ ಸಮಾರಂಭ ಇಂದು ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ರಾಜ್ಯ ಪ್ರ.ಕಾರ್ಯದರ್ಶಿ ಲೋಕೇಶ ಭಾಗಿ

**ರಾಯಚೂರು,ಡಿ.24–** ಕರ್ನಾಟಕ ಕಾರ್ಯನಿರತ ಪರ್ತ್ರಕರ್ತರ ಸಂಘದ 2025–2028ನೇ ಸಾಲಿನ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ನಗರದ ಕನ್ನಡ ಭವನದಲ್ಲಿ ಡಿ.25ರ ಸಂಜೆ 4 ಗಂಟೆಗೆ ಆಯೋಜಿಸಲಾಗಿದೆ.

ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಕಾರ್ಯಕ್ರಮ ಉದ್ಘಾಟಿಸುವರು. ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ ಜಿಲ್ಲಾ ಮತ್ತು ತಾಲೂಕು ಘಟಕಗಳ ನೂತನ ಪದಾಧಿಕಾರಿಗಳಿಗೆ ಪ್ರಮಾಣ ವಚನ ಬೋಧನೆ ಮಾಡುವರು.

ರಾಜ್ಯ ಸಮಿತಿ ಸದಸ್ಯ ಬಸವರಾಜ ನಾಗಡದಿನ್ನಿ, ನಿಕಟಪೂರ್ವ ರಾಜ್ಯ ಸಮಿತಿ ಸದಸ್ಯ ಶಿವಮೂರ್ತಿ ಹಿರೇಮಠ, ನಿಕಟಪೂರ್ವ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಪಾಷಾ ಹಟ್ಟಿ ಸೇರಿದಂತೆ ಇತರರು ಪಾಲ್ಗೊಳ್ಳುವರು.

ಜಿಲ್ಲಾಧ್ಯಕ್ಷ ಆರ್.ಗುರುನಾಥ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದ ಬಳಿಕ ರಾಜ್ಯಾಧ್ಯಕ್ಷರ ಅಧ್ಯಕ್ಷತೆಯಲ್ಲಿ ರಾಯಚೂರಿನಲ್ಲಿ ಜರುಗಲಿರುವ ಪತ್ರಕರ್ತರ ರಾಜ್ಯ ಸಮ್ಮೇಳನದ ಕುರಿತು ಪೂರ್ವಭಾವಿ ಸಭೆ ಜರುಗಲಿದೆ.

ಸಂಘದ ಎಲ್ಲ ಸದಸ್ಯರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸಂಘದ ಜಿಲ್ಲಾಧ್ಯಕ್ಷ ಆರ್.ಗುರುನಾಥ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ಧಯ್ಯಸ್ವಾಮಿ ಕುಕನೂರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಶ್ರೀರಾಮನ ಪಾತ್ರದಲ್ಲಿ ಶಕೀಲ್ ಪ್ರತಿಭೆ ಅನಾವರಣ



**ಔರಾದ್: ಡಿ.24–**ತಾಲೂಕಿನ ಕೊಳ್ಳೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಉತ್ತಮ ಪ್ರದರ್ಶನ ನೀಡುವ ಮೂಲಕ ದ್ವಿತೀಯ ಸ್ಥಾನ ಪಡೆದಿದೆ.

ಶಾಲೆಯ ವಿದ್ಯಾರ್ಥಿ ಶಕೀಲ್ ಶಿರಾಜಪಾಶಾ ಅವರು ಛದ್ಮವೇಷ ವಿಭಾಗದಲ್ಲಿ ಶ್ರೀರಾಮನ ಪಾತ್ರ ತಾಲೂಕಿಗೆ ದ್ವಿತೀಯ ಸ್ಥಾನ ಪಡೆದಿದ್ದಾರೆ. ರಾಖಿ ಸುರ್ಯಕಾಂತ ಅಭಿನಯ ಗೀತೆಯಲ್ಲಿ ಬಹುಮಾನ ಪಡೆದಿದ್ದಾರೆ. ಮಕ್ಕಳಿಗೆ ಶಾಲೆಯ ಸಹ ಶಿಕ್ಷಕಿ ಆಶಾಬಿ ಅವರು ಮಾರ್ಗದರ್ಶನ ಮಾಡಿದ್ದು ಮಕ್ಕಳ ಪ್ರತಿಭೆ ಅನಾವರಣಗೊಂಡಿದೆ.

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಮುಖ್ಯ ಶಿಕ್ಷಕ ಕಲ್ಲಪ್ಪ ಎಸ್ ಚಳಕಾಪುರೆ, ಶಿಕ್ಷಕರಾದ ದಶರಥ ವನಮಾರಪಳ್ಳಿ, ರಾಜಕುಮಾರ ಪಾಂಚಾಳ, ಜ್ಯೋತಿ, ಧರ್ಮಪ್ರಿಯಾ, ಮುಕ್ತಬಾಯಿ ಹರ್ಷ ವ್ಯಕ್ತಪಡಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H